ಸಂಪುಟ: 11 ಸಂಚಿಕೆ: 204 ಪುಟಗಳು: 4+2 ಬೆಲೆ: ₹ 3.00 ಶುಕ್ರವಾರ, ಸೆಪ್ಟೆಂಬರ್ 18, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 204 Pages : 4+2 Rate : 3.00 Friday, September 18, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ತಕ್ಷಣ ಮರುಸಮೀಕ್ಷೆ ನಡೆಸಿ ಬರಪೀಡಿತ ಎಂದು ಘೋಷಿಸಿ: ಅನಿಲ ಮೆಣಸಿನಕಾಯಿ

# ಬರ ಘೋಷಣೆಯಲ್ಲಿ ಗದಗಕ್ಕೆ ಅನ್ಯಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರ ಪ್ರಕಟಿಸಿರುವ ಬರಪೀಡಿತ ತಾಲೂಕುಗಳ ಪಟ್ಟಿಯಿಂದ ಗದಗ ತಾಲೂಕನ್ನು ಕೈಬಿಟ್ಟಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ಗದಗ ವಿಧಾನಸಭಾ ಕ್ಷೇತ್ರದ ಬಿಜೆಪಿ ಪರಾಜಿತ ಅಭ್ಯರ್ಥಿ ಅನಿಲ್ ಪಿ. ಮೆಣಸಿನಕಾಯಿ, ತಾಲೂಕಿನಲ್ಲಿ ವಾಸ್ತವಿಕ ಬರ ಪರಿಸ್ಥಿತಿಯ ಕುರಿತು ತಕ್ಷಣ ಮರುಸಮೀಕ್ಷೆ ನಡೆಸಿ, ಅರ್ಹತೆ ಆಧರಿಸಿ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂದು ಒತ್ತಾಯಿಸಿದ್ದಾರೆ.

ಗದಗ ತಾಲೂಕಿನಲ್ಲಿ ಮಳೆಯ ಕೊರತೆಯಿಂದ ಬೆಳೆಹಾನಿಯಾಗಿದ್ದು, ಅಂತರ್ಜಲ ಮಟ್ಟ ಕುಸಿತ, ಜಾನುವಾರುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ಸಮಸ್ಯೆ ಸೇರಿದಂತೆ ರೈತರು ಹಲವು ಸಂಕಷ್ಟಗಳನ್ನು ಎದುರಿಸುತ್ತಿದ್ದಾರೆ. ಬಿತ್ತನೆಗಾಗಿ ಸಾಲ ಮಾಡಿಕೊಂಡಿರುವ ರೈತರಿಗೆ ಬೆಳೆ ನಷ್ಟದಿಂದ ಆರ್ಥಿಕ ಹೊರೆ ಹೆಚ್ಚಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿ ಗದಗವನ್ನು ಸೇರ್ಪಡೆ ಮಾಡದಿರುವುದು ಪರಿಶೀಲನೆಗೆ ಒಳಪಡಬೇಕಾದ ವಿಷಯವಾಗಿದೆ ಎಂದು ಮೆಣಸಿನಕಾಯಿ ತಿಳಿಸಿದ್ದಾರೆ.



ಬರಪೀಡಿತ ಪ್ರದೇಶವೆಂದು ಘೋಷಣೆಯಾದ ಬಳಿಕ ಸರ್ಕಾರದ ನಿಯಮಾನುಸಾರ ಬೆಳೆಹಾನಿ ಪರಿಹಾರ, ಕುಡಿಯುವ ನೀರು, ಜಾನುವಾರುಗಳಿಗೆ ಮೇವು, ಉದ್ಯೋಗ ಖಾತರಿ ಯೋಜನೆಯಡಿ ಹೆಚ್ಚುವರಿ ಉದ್ಯೋಗ ಸೇರಿದಂತೆ ವಿವಿಧ ಪರಿಹಾರ ಕ್ರಮಗಳು ಜಾರಿಯಾಗುತ್ತವೆ. ಹೀಗಾಗಿ ಗದಗ ತಾಲೂಕಿನ ಅರ್ಹ ರೈತರು ಯಾವುದೇ ನೆರವಿನಿಂದ ವಂಚಿತರಾಗದಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಗದಗ ತಾಲೂಕಿನ ಬರ ಪರಿಸ್ಥಿತಿ ಕುರಿತು ಅಧಿಕಾರಿಗಳಿಂದ ವಾಸ್ತವಿಕ ಬೆಳೆಹಾನಿ, ಮಳೆಯ ಪ್ರಮಾಣ ಹಾಗೂ ಇತರೆ ಸಂಬಂಧಿತ ಅಂಶಗಳ ಸಮಗ್ರ ವರದಿ ಪಡೆದು ಮರುಪರಿಶೀಲನೆ ನಡೆಸಬೇಕು. ಸರ್ಕಾರದ ಬರ ಘೋಷಣೆ ಮಾನದಂಡಗಳಿಗೆ ತಾಲೂಕು ಅರ್ಹವಾಗಿದ್ದರೆ, ವಿಳಂಬವಿಲ್ಲದೆ ಬರಪೀಡಿತ ಪ್ರದೇಶವೆಂದು ಘೋಷಿಸಿ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಅವರು ಹೇಳಿದ್ದಾರೆ.

ಸರ್ಕಾರ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗುವುದು. ಬಳಿಕವೂ ಸ್ಪಂದನೆ ದೊರೆಯದಿದ್ದರೆ ರೈತರು, ಯುವಕರು, ಮಹಿಳೆಯರು ಹಾಗೂ ನಾಗರಿಕರೊಂದಿಗೆ ಕಾನೂನುಬದ್ಧ ಮತ್ತು ಶಾಂತಿಯುತ ಹೋರಾಟ ನಡೆಸಲಾಗುವುದು. ಪೂರ್ವಭಾವಿ ನೋಟಿಸ್ ನೀಡಿ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಆರಂಭಿಸುವುದು ಅನಿವಾರ್ಯವಾಗಲಿದೆ ಎಂದು ಅನಿಲ್ ಮೆಣಸಿನಕಾಯಿ ಎಚ್ಚರಿಸಿದ್ದಾರೆ.

> ಬರಪೀಡಿತ ತಾಲೂಕುಗಳ ಘೋಷಣೆಗೆ ನಿಗದಿಪಡಿಸಿರುವ ಮಾನದಂಡಗಳ ಆಧಾರದ ಮೇಲೆ ಗದಗ ತಾಲೂಕಿನ ಪರಿಸ್ಥಿತಿಯನ್ನು ಸರ್ಕಾರ ತಕ್ಷಣ ಮರುಪರಿಶೀಲಿಸಬೇಕು. ಅರ್ಹತೆ ಇದ್ದರೆ ವಿಳಂಬವಿಲ್ಲದೆ ಬರಪೀಡಿತ ತಾಲೂಕು ಎಂದು ಘೋಷಿಸಿ ರೈತರಿಗೆ ಪರಿಹಾರ ಒದಗಿಸಬೇಕು. ಸರ್ಕಾರ ಸ್ಪಂದಿಸದಿದ್ದರೆ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ನಡೆಸಲಾಗುವುದು.
>
> – ಅನಿಲ್ ಪಿ. ಮೆಣಸಿನಕಾಯಿ, ಬಿಜೆಪಿ ಪರಾಜಿತ ಅಭ್ಯರ್ಥಿ, ಗದಗ ವಿಧಾನಸಭಾ ಕ್ಷೇತ್ರ

### ಪ್ರಮುಖ ಬೇಡಿಕೆಗಳು

* ಗದಗ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕು.
* ವೈಜ್ಞಾನಿಕ ಹಾಗೂ ಪಾರದರ್ಶಕ ಮರುಸಮೀಕ್ಷೆ ನಡೆಸಬೇಕು.
* ಬೆಳೆಹಾನಿಗೊಳಗಾದ ರೈತರಿಗೆ ತ್ವರಿತ ಪರಿಹಾರ ಒದಗಿಸಬೇಕು.
* ಕುಡಿಯುವ ನೀರು ಮತ್ತು ಜಾನುವಾರುಗಳ ಮೇವಿಗೆ ತುರ್ತು ವ್ಯವಸ್ಥೆ ಕಲ್ಪಿಸಬೇಕು.
* ರೈತರ ಸಾಲ ವಸೂಲಾತಿ ಕುರಿತು ಸರ್ಕಾರದ ನಿಯಮಾನುಸಾರ ಪರಿಹಾರ ಕ್ರಮ ಕೈಗೊಳ್ಳಬೇಕು.
* ಉದ್ಯೋಗ ಖಾತರಿ ಯೋಜನೆಯಡಿ ಹೆಚ್ಚುವರಿ ಉದ್ಯೋಗ ದಿನಗಳನ್ನು ಒದಗಿಸಬೇಕು.

## ಸೆ.21ರಂದು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ

**ವಿಜಯಸಾಕ್ಷಿ ಸುದ್ದಿ, ಗದಗ**



ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಅವರ ಅಧ್ಯಕ್ಷತೆಯಲ್ಲಿ ಸೆ.21ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಯಲಿದೆ. ಸೆ.15ರವರೆಗೆ ಜಿಲ್ಲೆಯಲ್ಲಿನ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಹಾಗೂ ಪ್ರಗತಿ ಕುರಿತು ಸಭೆಯಲ್ಲಿ ಪರಿಶೀಲನೆ ನಡೆಸಲಾಗುವುದು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಮಿತಿ ಸದಸ್ಯ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಸುಂಡಿಯಲ್ಲಿ ಸೆ.19ರಂದು 'ಪ್ರಜಾಸೇವೆ ಆಂದೋಲನ'

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ, ಸರ್ಕಾರದ ವಿವಿಧ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಉದ್ದೇಶದಿಂದ ಸೆ.19ರಂದು 'ಪ್ರಜಾಸೇವೆ ಆಂದೋಲನ' ಕಾರ್ಯಕ್ರಮ ಆಯೋಜಿಸಲಾಗಿದೆ.

ಅಂದು ಶನಿವಾರ ಬೆಳಿಗ್ಗೆ 10 ಗಂಟೆಗೆ ತಾಲೂಕಿನ ಅಸುಂಡಿ ಗ್ರಾಮದ ಕುವೆಂಪು ಶತಮಾನೋತ್ಸವ ಸರಕಾರಿ ಮಾದರಿ ಶಾಲೆಯಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ಗದಗ ತಹಸೀಲ್ದಾರ್ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ. ಸಾರ್ವಜನಿಕರು ತಮ್ಮ ಕುಂದುಕೊರತೆಗಳು ಹಾಗೂ ವಿವಿಧ ಸರ್ಕಾರಿ ಸೌಲಭ್ಯಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದು, ಕಾರ್ಯಕ್ರಮದ ಪ್ರಯೋಜನ ಪಡೆದುಕೊಳ್ಳುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ದೀಕ್ಷಾಭೂಮಿ ಯಾತ್ರೆಗೆ ಆನ್‌ಲೈನ್ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ನಾಗಪುರದ ದೀಕ್ಷಾಭೂಮಿಯಲ್ಲಿ ಅ. 21ರಂದು ನಡೆಯಲಿರುವ ಪ್ರವರ್ತನ ದಿನ ಕಾರ್ಯಕ್ರಮದ ಅಂಗವಾಗಿ ಡಾ. ಬಿ.ಆರ್. ಅಂಬೇಡ್ಕರ್ ಅನುಯಾಯಿಗಳಿಗಾಗಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ದೀಕ್ಷಾಭೂಮಿ ಯಾತ್ರೆ ಆಯೋಜಿಸಲಾಗಿದೆ.

2026–27ನೇ ಸಾಲಿನ ಯಾತ್ರೆ ಅ. 19ರಿಂದ 22ರವರೆಗೆ ನಡೆಯಲಿದ್ದು, ಯಾತ್ರಾರ್ಥಿಗಳಿಗೆ ಬಸ್ ಹಾಗೂ ರೈಲಿನ ಮೂಲಕ ಪ್ರಯಾಣ ಮತ್ತು ಹಿಂದಿರುಗುವ ವ್ಯವಸ್ಥೆ ಕಲ್ಪಿಸಲಾಗುತ್ತದೆ. ಅರ್ಹ ಯಾತ್ರಾರ್ಥಿಗಳನ್ನು ಆಯ್ಕೆ ಮಾಡಲಾಗುವುದು.

ಯಾತ್ರೆಯಲ್ಲಿ ಭಾಗವಹಿಸಲು ಇಚ್ಛಿಸುವ ಅರ್ಹರು ಸೆ. 19ರಿಂದ ಅ. 9ರೊಳಗೆ ಸಮಾಜ ಕಲ್ಯಾಣ ಇಲಾಖೆಯ ಅಧಿಕೃತ ವೆಬ್‌ಸೈಟ್ "swd.karnataka.gov.in" (https://swd.karnataka.gov.in) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು.

ಆನ್‌ಲೈನ್ ಅರ್ಜಿಯ ಪ್ರತಿಯೊಂದಿಗೆ ಆಧಾರ್ ಕಾರ್ಡ್, ಪ್ರಸ್ತುತ ವಿಳಾಸ ಹಾಗೂ ದೂರವಾಣಿ ಸಂಖ್ಯೆಯ ವಿವರಗಳನ್ನು ಲಗತ್ತಿಸಿ ಸಂಬಂಧಿಸಿದ ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಕ್ಷಣ, ಕೌಶಲ್ಯ, ಸಂಘಟನೆಯಿಂದ ಸಮುದಾಯದ ಪ್ರಗತಿ: ಎಸ್.ವಿ. ಸಂಕನೂರ

# ಪಂಚ ಕಾಯಕಗಳಿಂದ ಸಮಾಜ ನಿರ್ಮಾಣ

**ವಿಜಯಸಾಕ್ಷಿ ಸುದ್ದಿ, ಗದಗ**

ಪಂಚ ಕಾಯಕಗಳ ಮೂಲಕ ದೇಶದ ಕಲೆ, ಸಂಸ್ಕೃತಿ ಹಾಗೂ ವಾಸ್ತುಶಿಲ್ಪ ಕ್ಷೇತ್ರಕ್ಕೆ ವಿಶ್ವಕರ್ಮ ಸಮುದಾಯ ನೀಡಿರುವ ಕೊಡುಗೆ ಅಪಾರ ಹಾಗೂ ಸ್ಮರಣೀಯ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ನಡೆದ ವಿಶ್ವಕರ್ಮ ಜಯಂತಿ–2026 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಡಗಿತನ, ಕಮ್ಮಾರಿಕೆ, ಶಿಲ್ಪಕಲೆ ಸೇರಿದಂತೆ ವಿವಿಧ ಕಾಯಕಗಳಲ್ಲಿ ವಿಶ್ವಕರ್ಮ ಸಮುದಾಯ ತನ್ನದೇ ಆದ ವಿಶಿಷ್ಟ ಛಾಪು ಮೂಡಿಸಿದೆ. ದೇಶದ ಭವ್ಯ ದೇವಾಲಯಗಳು, ವಾಸ್ತುಶಿಲ್ಪ ಹಾಗೂ ಶಿಲ್ಪಕಲೆಗಳ ನಿರ್ಮಾಣದಲ್ಲಿ ವಿಶ್ವಕರ್ಮರ ಕೌಶಲ್ಯ ಮತ್ತು ಪರಿಶ್ರಮದ ಹೆಜ್ಜೆ ಗುರುತುಗಳಿವೆ ಎಂದರು.

ಸಮುದಾಯದ ಹಲವು ಕುಟುಂಬಗಳು ಆರ್ಥಿಕವಾಗಿ ಹಿಂದುಳಿದಿದ್ದು, ಮಕ್ಕಳ ಭವಿಷ್ಯ ಉಜ್ವಲವಾಗಬೇಕಾದರೆ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಪೋಷಕರು ಮಕ್ಕಳ ಶಿಕ್ಷಣದ ಬಗ್ಗೆ ನಿರ್ಲಕ್ಷ್ಯ ವಹಿಸದೆ, ಉನ್ನತ ಶಿಕ್ಷಣಕ್ಕೆ ಅಗತ್ಯ ಪ್ರೋತ್ಸಾಹ ನೀಡಬೇಕು ಎಂದು ಕರೆ ನೀಡಿದರು. ಸಂಖ್ಯೆಯಲ್ಲಿ ಸಣ್ಣ ಸಮುದಾಯವಾಗಿದ್ದರೂ ವಿಶ್ವಕರ್ಮರಲ್ಲಿರುವ ಒಗ್ಗಟ್ಟು ಮಾದರಿಯಾಗಿದೆ. ಯುವಜನರು ಸಾಂಪ್ರದಾಯಿಕ ಕಲೆ–ಕೌಶಲ್ಯವನ್ನು ಉಳಿಸಿಕೊಂಡು ಆಧುನಿಕ ಶಿಕ್ಷಣ ಮತ್ತು ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಬೇಕು. ಶಿಕ್ಷಣ, ಸಂಘಟನೆ ಹಾಗೂ ಪರಸ್ಪರ ಸಹಕಾರದ ಮೂಲಕ ಸಮುದಾಯದ ಸಮಗ್ರ ಅಭಿವೃದ್ಧಿ ಸಾಧ್ಯ ಎಂದು ಸಂಕನೂರ ಹೇಳಿದರು.



> ಸಾಂಪ್ರದಾಯಿಕ ಕಾಯಕದ ಕೌಶಲ್ಯವನ್ನು ಉಳಿಸಿಕೊಂಡು, ಶಿಕ್ಷಣ ಮತ್ತು ಆಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಯುವಜನತೆ ಮುನ್ನಡೆಯಬೇಕು. ಇದರಿಂದ ವಿಶ್ವಕರ್ಮ ಸಮುದಾಯದ ಮುಂದಿನ ಪೀಳಿಗೆಗೆ ಹೊಸ ಅವಕಾಶಗಳ ಬಾಗಿಲು ತೆರೆಯಲಿದೆ.
>
> – ಎಸ್.ವಿ. ಸಂಕನೂರ, ವಿಧಾನ ಪರಿಷತ್ ಸದಸ್ಯ

ನಿವೃತ್ತ ಶಿಕ್ಷಕ ಹಾಗೂ ಸಾಹಿತಿ ಬಿ.ಎಂ. ಯರಕದ ಮಾತನಾಡಿ, ಪೌರಾಣಿಕ ಪರಂಪರೆಯಲ್ಲಿ ವಿಶ್ವಕರ್ಮನನ್ನು ಮಹಾನ್ ಶಿಲ್ಪಿ ಹಾಗೂ ದಿವ್ಯಾಸ್ತ್ರಗಳ ನಿರ್ಮಾತೃ ಎಂದು ಸ್ಮರಿಸಲಾಗುತ್ತದೆ. ರೈತರ ಕಾಯಕಕ್ಕೆ ಅಗತ್ಯವಾದ ಉಪಕರಣಗಳನ್ನು ರೂಪಿಸಿ, ಅವುಗಳ ದುರಸ್ತಿ ಹಾಗೂ ಸುಧಾರಣೆ ಮೂಲಕ ವಿಶ್ವಕರ್ಮ ಸಮುದಾಯದ ಕಾಯಕಜೀವಿಗಳು ಕೃಷಿ ಚಟುವಟಿಕೆಗಳಿಗೆ ನಿರಂತರವಾಗಿ ನೆರವಾಗಿದ್ದಾರೆ ಎಂದರು.

ಐಹೊಳೆ, ಬಾದಾಮಿ, ಬೇಲೂರು ಹಾಗೂ ಹಳೇಬೀಡು ಸೇರಿದಂತೆ ಕರ್ನಾಟಕದ ಐತಿಹಾಸಿಕ ತಾಣಗಳಲ್ಲಿರುವ ದೇವಾಲಯಗಳು ಮತ್ತು ಶಿಲ್ಪಕೃತಿಗಳು ಶಿಲ್ಪಿಗಳ ಅಪೂರ್ವ ಕಲಾ ನೈಪುಣ್ಯಕ್ಕೆ ಸಾಕ್ಷಿಯಾಗಿವೆ. ವಿಶ್ವಕರ್ಮ, ಜಕಣಾಚಾರಿ ಹಾಗೂ ಡಂಕಣಾಚಾರಿ ಅವರಂತಹ ಶಿಲ್ಪಿಗಳ ಕಲಾ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಅಗತ್ಯವಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರು, ಹಿರಿಯರು ಹಾಗೂ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್., ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ವಿ. ಬಳ್ಳಾರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

# ಬರ ಘೋಷಣೆಯಲ್ಲಿ ಗದಗಕ್ಕೆ ಅನ್ಯಾಯ: ಬಾಬರಿ ಖಂಡನೆ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರ ಪ್ರಕಟಿಸಿರುವ ಬರ ಘೋಷಣೆಯ ಮೂರನೇ ಪಟ್ಟಿಯಲ್ಲಿ ಗದಗ ಜಿಲ್ಲೆಯಲ್ಲಿ ನರಗುಂದ, ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳನ್ನು ಮಾತ್ರ ಬರಪೀಡಿತ ಎಂದು ಘೋಷಿಸಿ, ಗದಗ ತಾಲೂಕನ್ನು ಕೈಬಿಟ್ಟಿರುವುದಕ್ಕೆ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗದಗ ಜಿಲ್ಲೆಗೆ ಭೇಟಿ ನೀಡಿ ಬರ ಪರಿಸ್ಥಿತಿ ಪರಿಶೀಲನೆ ನಡೆಸಿದರೂ, ಗದಗ ತಾಲೂಕು ಬರಪೀಡಿತ ಪಟ್ಟಿಗೆ ಸೇರ್ಪಡೆಯಾಗದಿರುವುದು ರೈತರಲ್ಲಿ ಅಸಮಾಧಾನ ಮೂಡಿಸಿದೆ ಎಂದು ಅವರು ಹೇಳಿದ್ದಾರೆ. ಗದಗ ತಾಲೂಕಿನಲ್ಲಿ ಮಳೆಯ ಕೊರತೆಯಿಂದ ಬೆಳೆಗಳು ಒಣಗಿ ಹೋಗಿದ್ದು, ರೈತರು ತೀವ್ರ ನಷ್ಟ



ಅನುಭವಿಸುತ್ತಿದ್ದಾರೆ. ಕಳೆದ ಎರಡು ತಿಂಗಳಿನಿಂದ ಸಮರ್ಪಕ ಮಳೆಯಾಗದೆ ಕೃಷಿ ಚಟುವಟಿಕೆಗಳ ಮೇಲೆ ಪರಿಣಾಮ ಬೀರಿದೆ. ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯೂ ಎದುರಾಗಿದೆ ಎಂದು ಬಾಬರಿ ತಿಳಿಸಿದ್ದಾರೆ.

ಸರ್ಕಾರದ ಪಟ್ಟಿಯಲ್ಲಿ ಗದಗ ತಾಲೂಕಿಗೆ ಸ್ಥಾನ ನೀಡದಿರುವುದನ್ನು ಮರುಪರಿಶೀಲಿಸಬೇಕು. ಜಿಲ್ಲಾಧಿಕಾರಿ ಹಾಗೂ ರಾಜ್ಯ ಸರ್ಕಾರ ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಿ ಕೂಡಲೇ ಗದಗ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕು. ಇಲ್ಲದಿದ್ದರೆ ರೈತ ಸಂಘದ ವತಿಯಿಂದ ಹೋರಾಟ ನಡೆಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.

# ಇಂದಿನಿಂದ ದಸರಾ ಕ್ರೀಡಾಕೂಟ

**ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕು ಆಡಳಿತ, ತಾಲೂಕು ಪಂಚಾಯಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಗದಗ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಸೆ.18 ಮತ್ತು 19ರಂದು ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

ಎರಡು ದಿನಗಳ ಕ್ರೀಡಾಕೂಟ ಬೆಳಿಗ್ಗೆ 10 ಗಂಟೆಗೆ ಆರಂಭವಾಗಲಿದೆ. ಉಪ ಮುಖ್ಯಮಂತ್ರಿ ಹಾಗೂ ಕ್ರೀಡಾ ಸಚಿವ ಡಾ.ಜಿ. ಪರಮೇಶ್ವರ, ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್ ಹಾಗೂ ವಿಧಾನಸಭೆ ಸಭಾಧ್ಯಕ್ಷ ಜಿ. ಎಸ್. ಪಾಟೀಲ ಅವರು ಘನ ಉಪಸ್ಥಿತಿ ವಹಿಸಲಿದ್ದಾರೆ. ಉನ್ನತ ಶಿಕ್ಷಣ ಸಚಿವ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಕ್ರೀಡಾಕೂಟ ಉದ್ಘಾಟಿಸಲಿದ್ದು, ಗದಗ ಶಾಸಕ ಡಾ.ಎಚ್. ಕೆ. ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ. ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಶಾಸಕರಾದ ಸಿ.ಸಿ. ಪಾಟೀಲ, ಡಾ.ಚಂದ್ರು ಲಮಾಣಿ, ಬಸವರಾಜ ಹೊರಟ್ಟಿ, ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ ಸೇರಿದಂತೆ ಹಲವು ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಸಹಕಾರ ಸಂಘಗಳ ನಿಬಂಧಕರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ., ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್, ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್. ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ಭಾಗವಹಿಸಲಿದ್ದಾರೆ. ಗದಗ ತಾಲೂಕು ತಹಶೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಡಾ.ಹೀರಾಲಾಲ ಜನಗಿ ಹಾಗೂ ತಾಲೂಕು ಯುವಜನ ಸೇವಾ ಮತ್ತು ಕ್ರೀಡಾಧಿಕಾರಿ ಚಂದ್ರಶೇಖರ ಮೇಲಿನಮನಿ ಸರ್ವರನ್ನು ಸ್ವಾಗತಿಸಿದ್ದಾರೆ.

# ನಾಳೆ ಬೂದೀಶ್ವರ ಮಹಾಸ್ವಾಮಿಗಳ 12ನೇ ವರ್ಷದ ಪುಣ್ಯಾರಾಧನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಶ್ರಾವಣ ಮಾಸದ ಪೂಜಾ ಮುಕ್ತಾಯ ಸಮಾರಂಭ ಹಾಗೂ ಲಿಂ. ಶ್ರೀ ಷ.ಬ್ರ.ಜ. ಅಭಿನವ ಬೂದೀಶ್ವರ ಮಹಾಸ್ವಾಮಿಗಳವರ 12ನೇ ವರ್ಷದ ಪುಣ್ಯಾರಾಧನೆ ಅಂಗವಾಗಿ ಅಂತೂರು–ಬೆಂತೂರು ಗ್ರಾಮ ಪಂಚಾಯಿತಿ ಸಹಯೋಗದಲ್ಲಿ 775 ಸಸಿ ನೆಡುವ ಕಾರ್ಯಕ್ರಮ ಸೆ. 19ರಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿದೆ.

ನವಲಗುಂದ ಗವಿಮಠದ ಬಸವಲಿಂಗ ಮಹಾಸ್ವಾಮಿಗಳು ಹಾಗೂ ಬೂದೀಶ್ವರ ಸಂಸ್ಥಾನ ಮಠದ ಜಗದ್ಗುರು. ಡಾ. ರಾಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ಕಾರ್ಯಕ್ರಮ ಜರುಗಲಿದೆ.

ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು (ಬ್ರಹ್ಮಣ್ಯ–ಆಡೂರ–ರಾಜೂರು–ಗದಗ), ಜಡೆಸಿದ್ದೇಶ್ವರ ಶಿವಾಚಾರ್ಯರು (ಜಡೆಮಠ, ದೇವರಹಿಪ್ಪರಗಿ), ಬಸವ ಸಮರ್ಥ ಮಹಾಸ್ವಾಮಿಗಳು (ಜ್ಞಾನಯೋಗಾಶ್ರಮ, ಸಿರುಂಜ), ಶ್ರೀ ಪ್ರಭುಲಿಂಗ ದೇವರು (ಗುದ್ನೇಶ್ವರ ಮಠ, ನೀಲಗುಂದ), ಶ್ರೀ ಪ.ಪೂ. ಶಿವಶರಣದೇವರು (ಗುಳೇದಗುಡ್ಡ), ಶ್ರೀ ಡಾ. ಗುರುಲಿಂಗದೇವರು (ವಿರಕ್ತಮಠ, ಮಹಾಲಿಂಗಪುರ) ಹಾಗೂ ಶ್ರೀಚಂದ್ರಶೇಖರ ಶಾಸ್ತ್ರಿಗಳ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮವನ್ನು ನವಲಗುಂದ ಶಾಸಕ ಎನ್.ಎಚ್. ಕೋನರಡ್ಡಿ ಉದ್ಘಾಟಿಸಲಿದ್ದು, ಗ್ರಾಪಂ ಮಾಜಿ ಅಧ್ಯಕ್ಷ ಪ್ರಕಾಶಗೌಡ ಎಚ್. ಪಾಟೀಲ ಅಧ್ಯಕ್ಷತೆ ವಹಿಸುವರು.

ಅತಿಥಿಗಳಾಗಿ ಸಚಿನಗೌಡ ಡಿ. ಪಾಟೀಲ, ಸಿದ್ದಲಿಂಗೇಶ್ವರ ಎಚ್. ಪಾಟೀಲ, ವಿಜಯಕುಮಾರ ಗುಡ್ಡದ, ವಿಜಯಕುಮಾರ ಗಡ್ಡಿ, ಮಂಜುನಾಥ ಮಾಯಣ್ಣವರ, ನಾಗರಾಜ ದಳವಾಯಿ, ಅಪ್ಪಣ್ಣ ಇನಾಮತಿ, ನಿಂಗಪ್ಪ ಹಿಟಬುತ್ತಿ, ಮುರುಗೇಶ ಯಕಲಾಸಪುರ, ಶಿವನಗೌಡ ಪಾಟೀಲ, ರವಿಕಾಂತ ಅಂಗಡಿ, ಫಕೀರಪ್ಪ ವೆಂಕಟಾಪುರ, ಪಿ.ಎಸ್. ಸೋಮಲಿಂಗನಗೌಡ್ರ ಹಾಗೂ ಕೆ.ಎಲ್. ಪೂಜಾರ ಸೇರಿದಂತೆ ಗಣ್ಯರು ಆಗಮಿಸುವರು.

# ಮಳೆಗಾಗಿ ಭಕ್ತನ ಉರುಳು ಸೇವೆ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಳೆ ಕೊರತೆಯಿಂದ ರೈತರು ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ಉತ್ತಮ ಮಳೆಗಾಗಿ ಜಕ್ಕಲಿ ಗ್ರಾಮದಲ್ಲಿ ಭಕ್ತ ಶಿವರಾಜ ಶರಣಪ್ಪ ಮುಗಳಿ ಉರುಳು ಸೇವೆ ಸಲ್ಲಿಸಿದರು.

ಲಿಂ. ಗಾನಯೋಗಿ ಪಂಡಿತ ಪುಟ್ಟರಾಜ ಗವಾಯಿಗಳವರ 16ನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಆಂಜನೇಯ ದೇವಸ್ಥಾನದಿಂದ ಪುಟ್ಟರಾಜ ಗವಾಯಿಗಳವರ ಪುತ್ಥಳಿವರೆಗೆ ಉರುಳು ಸೇವೆ ಸಲ್ಲಿಸಿ, ಉತ್ತಮ ಮಳೆ, ಸಮೃದ್ಧ ಬೆಳೆ ಹಾಗೂ ಗ್ರಾಮಸ್ಥರ ನೆಮ್ಮದಿಗಾಗಿ ಪ್ರಾರ್ಥಿಸಿದರು.

ಗ್ರಾಮದ ಬಸ್ ನಿಲ್ದಾಣದ ಬಳಿಯಿರುವ ಪುಟ್ಟರಾಜ ಗವಾಯಿಗಳವರ ಪುತ್ಥಳಿ ಬಳಿ ಕರ್ನಾಟಕ ರಕ್ಷಣಾ ವೇದಿಕೆ ಗ್ರಾಮ ಘಟಕ ಹಾಗೂ ಪುಟ್ಟರಾಜ ಗವಾಯಿಗಳವರ ಸೇವಾ ಸಮಿತಿ ಆಶ್ರಯದಲ್ಲಿ ಕಾರ್ಯಕ್ರಮ ನಡೆಯಿತು. ವೇದಮೂರ್ತಿ ಗುರುಲಿಂಗಮೂರ್ತಿ ಮಂಟಯ್ಯನಮಠಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಮಹಾರುದ್ರಾಭಿಷೇಕ ಹಾಗೂ ವಿಶೇಷ ಪೂಜೆ ನೆರವೇರಿತು.

ಈ ಸಂದರ್ಭದಲ್ಲಿ ಗ್ರಾಮದ ಭಕ್ತರು ಹಾಗೂ ಸಾರ್ವಜನಿಕರಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

> ಸತತ 12 ವರ್ಷಗಳಿಂದ ಪುಟ್ಟರಾಜ ಗವಾಯಿಗಳವರ ಪುಣ್ಯಸ್ಮರಣೆ ಸಂದರ್ಭದಲ್ಲಿ ಉರುಳು ಸೇವೆ ಸಲ್ಲಿಸುತ್ತಿದ್ದೇನೆ. ರೈತರ ಹೊಲಗಳಲ್ಲಿ ಉತ್ತಮ ಬೆಳೆ ಬರಬೇಕು, ಗ್ರಾಮಕ್ಕೆ ಸಮೃದ್ಧಿ ದೊರೆಯಬೇಕು ಎಂಬ ಆಶಯದಿಂದ ಈ ಸೇವೆ ಮಾಡುತ್ತಿದ್ದೇನೆ."
>
> – ಶಿವರಾಜ ಶರಣಪ್ಪ ಮುಗಳಿ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ


## ವೇರ್‌ಹೌಸ್ ರಸೀದಿ ಕಳೆದಿದೆ

ಗದಗ ಸೆಂಟ್ರಲ್ ವೇರ್‌ಹೌಸ್ ಕಾರ್ಪೊರೇಷನ್‌ನಲ್ಲಿ ಕಡಲೆ ದಾಸ್ತಾನು ಮಾಡಿದ್ದ ಬಾಂಡ್ (ರಸೀದಿ) ಸಂಖ್ಯೆ: WHR /1408/2025-26/00210 ಹಾಗೂ ಇತರ ದಾಖಲಾತಿಗಳು ದಿನಾಂಕ 19–02–2026 ರಂದು ನರೇಗಲ್ಲ ಬಸ್ ನಿಲ್ದಾಣದಲ್ಲಿ ಕಳೆದು ಹೋಗಿವೆ.

ಈ ಕುರಿತು ನರೇಗಲ್ಲ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಲಾಗಿದ್ದು, ಅರ್ಜಿ ಸಂಖ್ಯೆ 2429265/2026 ಆಗಿದೆ. ಯಾರಿಗಾದರೂ ಈ ಬಾಂಡ್ (ರಸೀದಿ) ದೊರೆತರೆ, ದಯವಿಟ್ಟು ಕೆಳಗಿನ ವಿಳಾಸಕ್ಕೆ ತಲುಪಿಸಲು ಅಥವಾ ದೂರವಾಣಿ ಕರೆ ಮಾಡಲು ವಿನಂತಿಸಲಾಗಿದೆ.

ಸಂಪರ್ಕ ವಿಳಾಸ ಹಾಗೂ ವಿವರ :
ಹೆಸರು : ಶರಣಪ್ಪಗೌಡ ವೀರುಪಾಕ್ಷಗೌಡ ಲಕ್ಕನಗೌಡರ
ಸ್ಥಳ : ನರೇಗಲ್ಲ (ಜಿಲ್ಲೆ: ಗದಗ) ಮೊಬೈಲ್ ಸಂಖ್ಯೆ: 8147558826

## ಮತದಾರರ ನೋಂದಣಿಗೆ 2 ದಿನ ಅವಕಾಶ

# ಸೆ.19–20ರಂದು ವಿಶೇಷ ಆಂದೋಲನ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ–2026ರ ಹಿನ್ನೆಲೆಯಲ್ಲಿ ಧಾರವಾಡ ಜಿಲ್ಲೆಯಲ್ಲಿ ಸೆಪ್ಟೆಂಬರ್ 19 ಮತ್ತು 20ರಂದು ಮತದಾರರ ನೋಂದಣಿಗಾಗಿ ವಿಶೇಷ ಆಂದೋಲನ ನಡೆಯಲಿದೆ. ಜಿಲ್ಲೆಯ ಎಲ್ಲ ಮತಗಟ್ಟೆಗಳಲ್ಲಿ ಬಿಎಲ್‌ಒ ಹಾಗೂ ಬಿಎಲ್‌ಎಗಳು ಉಪಸ್ಥಿತ–ರಿರುವುದರಿಂದ ಅರ್ಹ ನಾಗರಿಕರು ಈ ಅವಕಾಶದ ಸದುಪಯೋಗ ಪಡೆಯಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸ್ನೇಹಲ್ ಆರ್. ತಿಳಿಸಿದ್ದಾರೆ.



ಜಿಲ್ಲೆಯಲ್ಲಿ ಒಟ್ಟು 16,21,961 ಮತದಾರರ ಪೈಕಿ 13,53,946 ಮಂದಿಯ ಮಾಹಿತಿ ಪರಿಶೀಲಿಸಿ ಕರಡು ಪಟ್ಟಿಗೆ ಸೇರಿಸಲಾಗಿದೆ. ಪರಿಶೀಲನೆ ಸಂದರ್ಭದಲ್ಲಿ ಗೈರು, ವಲಸೆ, ಮರಣ, ದ್ವಿಪ್ರತಿ ಸೇರಿದಂತೆ ವಿವಿಧ ಕಾರಣಗಳಿಂದ 2,68,015 ಮತದಾರರನ್ನು ಗುರುತಿಸಲಾಗಿದೆ.

ಜುಲೈ 16ರಿಂದ ಸೆಪ್ಟೆಂಬರ್ 15ರವರೆಗೆ ನಮೂನೆ 6, 7 ಮತ್ತು 8ರಡಿ ಒಟ್ಟು 51,172 ಅರ್ಜಿಗಳು ಸ್ವೀಕೃತವಾಗಿವೆ. ಸೆಪ್ಟೆಂಬರ್ 16ರವರೆಗೆ ಜಿಲ್ಲೆಯಲ್ಲಿ 7,941 ಯುವ ಮತದಾರರು ಸೇರ್ಪಡೆಯಾಗಿದ್ದಾರೆ.

ಆಗಸ್ಟ್ 29 ಮತ್ತು 30ರಂದು ನಡೆದ ವಿಶೇಷ ಆಂದೋಲನದಲ್ಲಿ ಒಟ್ಟು 3,343 ಹಕ್ಕು ಮತ್ತು ಆಕ್ಷೇಪಣೆಗಳ ಅರ್ಜಿಗಳು ಸ್ವೀಕೃತವಾಗಿವೆ. ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಸೆಪ್ಟೆಂಬರ್ 23ರವರೆಗೆ ಅವಕಾಶವಿದೆ.

> ಸೆಪ್ಟೆಂಬರ್ 19 ಮತ್ತು 20ರಂದು ಜಿಲ್ಲೆಯ ಎಲ್ಲ ಮತಗಟ್ಟೆಗಳಲ್ಲಿ ಬಿಎಲ್‌ಒ ಹಾಗೂ ಬಿಎಲ್‌ಎಗಳು ಉಪಸ್ಥಿತರಿರಲಿದ್ದಾರೆ. ಅರ್ಹ ನಾಗರಿಕರು ಈ ವಿಶೇಷ ಆಂದೋಲನದ ಸದುಪಯೋಗ ಪಡೆದುಕೊಂಡು ಮತದಾರರ ಪಟ್ಟಿಗೆ ಸಂಬಂಧಿಸಿದ ತಮ್ಮ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬೇಕು.
>
> – ಸ್ನೇಹಲ್ ಆರ್., ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ

ಅಕ್ಟೋಬರ್ 1, 2026ಕ್ಕೆ 18 ವರ್ಷ ಪೂರ್ಣಗೊಳ್ಳುವ ಅರ್ಹ ಯುವಕರು ಸೇ–ರಿದಂತೆ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗದ ಅರ್ಹ ನಾಗರಿಕರು ನಮೂನೆ–6 ಹಾಗೂ ನಿಗದಿತ ಘೋಷಣಾ ನಮೂನೆ ಸಲ್ಲಿಸಿ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಡಿ ಜಿಲ್ಲೆಯಲ್ಲಿ ಇದುವರೆಗೆ 47,937 ನೋಟಿಸ್‌ಗಳನ್ನು ಜನರೇಟ್ ಮಾಡಲಾಗಿದ್ದು, ಈ ಪೈಕಿ 41,114 ನೋಟಿಸ್‌ಗಳನ್ನು ಸಾರ್ವಜನಿಕರಿಗೆ ತಲುಪಿಸಲಾಗಿದೆ. ನೋಟಿಸ್ ಪಡೆದವರಲ್ಲಿ 17,075 ಮತದಾರರ ವಿಚಾರಣೆ ಪೂರ್ಣಗೊಂಡಿದೆ. ವಿಚಾರಣೆಗೆ ಹಾಜರಾಗದ 8,925 ಮಂದಿಗೆ ಎರಡನೇ ಅವಕಾಶ ನೀಡಲಾಗಿದೆ.

ಮತದಾರರ ಪಟ್ಟಿಗೆ ಸಂಬಂಧಿಸಿದ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಲು ಸಹಾಯಕ ಮತದಾರರ ನೋಂದಣಿ ಅಧಿಕಾರಿಗಳ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲಾಗಿದೆ. ತಾಲೂಕು ಹಾಗೂ ನಗರ ವಾರ್ಡ್ ಮಟ್ಟದಲ್ಲಿ ಅಧಿಕಾರಿಗಳು ಲಭ್ಯವಿದ್ದು, ಹೆಸರು ಸೇರ್ಪಡೆ, ತಿದ್ದುಪಡಿ ಹಾಗೂ ಅಳಿಸುವಿಕೆ ಸೇರಿದಂತೆ ವಿವಿಧ ಸಮಸ್ಯೆಗಳ ಪರಿಹಾರಕ್ಕೆ ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದಾಗಿದೆ.



ಗದಗ: ನಗರದ ಶಹಪುರಪೇಟೆಯಲ್ಲಿ ಶ್ರೀ ಸಿದ್ಧಿವಿನಾಯಕ ಯುವಕ ಮಂಡಳಿಯಿಂದ 32ನೇ ವರ್ಷದ ಗಣೇಶ ಪ್ರತಿಷ್ಠಾಪನೆ ಮಾಡಲಾಗಿದೆ.

## ಯುಪಿಐ ಶುಲ್ಕ ವಿಧಿಸುವ ಕ್ರಮಕ್ಕೆ ಇಮ್ತಿಯಾಜ್ ಮಾನ್ವಿ ಖಂಡನೆ

# ಡಿಜಿಟಲ್ ಪಾವತಿಗೆ ಶುಲ್ಕ ಬೇಡ

**ವಿಜಯಸಾಕ್ಷಿ ಸುದ್ದಿ, ಗದಗ**

ಯುಪಿಐ ಡಿಜಿಟಲ್ ಪಾವತಿ ವ್ಯವಹಾರಗಳಿಗೆ ಶುಲ್ಕ ವಿಧಿಸುವ ಕೇಂದ್ರ ಸರ್ಕಾರದ ಪ್ರಸ್ತಾವಿತ ಕ್ರಮ ಜನವಿರೋಧಿಯಾಗಿದೆ ಎಂದು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಖಂಡಿಸಿದ್ದಾರೆ.

ಪ್ರಕಟಣೆ ಮೂಲಕ ಖಂಡನೆ ವ್ಯಕ್ತಪಡಿಸಿರುವ ಅವರು, ದೇಶದಲ್ಲಿ ನಗದುರಹಿತ ಹಾಗೂ ಡಿಜಿಟಲ್ ವಹಿವಾಟಿಗೆ ಉತ್ತೇಜನ ನೀಡುವ ಉದ್ದೇಶದಿಂದ ಕೇಂದ್ರ ಸರ್ಕಾರ 'ಡಿಜಿಟಲ್ ಇಂಡಿಯಾ' ಅಭಿಯಾನಕ್ಕೆ ಒತ್ತು ನೀಡಿದೆ. ಇದರ ಪರಿಣಾಮವಾಗಿ ಕೋಟ್ಯಂತರ ಜನರು ದಿನನಿತ್ಯದ ಹಣಕಾಸು ವ್ಯವಹಾರಗಳಿಗೆ ಯುಪಿಐ ವ್ಯವಸ್ಥೆಯನ್ನು ಅವಲಂಬಿಸಿದ್ದಾರೆ. ಇಂತಹ ಸಂದರ್ಭದಲ್ಲಿ ಡಿಜಿಟಲ್ ಪಾವತಿಗಳ ಮೇಲೆ ಶುಲ್ಕ ವಿಧಿಸುವ ಕ್ರಮ ಕೈಗೊಂಡರೆ ಗ್ರಾಹಕರು ಹಾಗೂ ಸಣ್ಣ ವ್ಯಾಪಾರಿಗಳ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳಲಿದೆ ಎಂದು ಹೇಳಿದ್ದಾರೆ.

ಯುಪಿಐ ಮೂಲಕ ಬ್ಯಾಂಕ್ ಖಾತೆಯಿಂದ ಬ್ಯಾಂಕ್ ಖಾತೆಗೆ ತ್ವರಿತವಾಗಿ ಹಣ ವರ್ಗಾವಣೆ ಮಾಡುವ ವ್ಯವಸ್ಥೆ ದೇಶದ ಡಿಜಿಟಲ್ ಹಣಕಾಸು ವಹಿವಾಟಿಗೆ ಮಹತ್ವದ ಬದಲಾವಣೆ ತಂದಿದೆ.



ಸಾರ್ವಜನಿಕರು ಹಾಗೂ ಸಣ್ಣ ವ್ಯಾಪಾರಿಗಳು ವ್ಯಾಪಕವಾಗಿ ಬಳಸುತ್ತಿರುವ ಈ ವ್ಯವಸ್ಥೆಗೆ ಶುಲ್ಕ ವಿಧಿಸುವುದು ಸೂಕ್ತವಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಡಿಜಿಟಲ್ ಇಂಡಿಯಾ, ಮೇಕ್ ಇನ್ ಇಂಡಿಯಾ, ಸ್ಟಾರ್ಟಪ್ ಇಂಡಿಯಾ ಸೇ–ರಿದಂತೆ ವಿವಿಧ ಯೋಜನೆಗಳ ಮೂಲಕ ಡಿಜಿಟಲ್ ಆರ್ಥಿಕತೆಯನ್ನು ಉತ್ತೇಜಿಸುವುದಾಗಿ ಹೇಳುತ್ತಿರುವ ಕೇಂದ್ರ ಸರ್ಕಾರ, ಮತ್ತೊಂದೆಡೆ ಯುಪಿಐ ವಹಿವಾಟಿಗೆ ಶುಲ್ಕ ವಿಧಿಸುವ ಚಿಂತನೆ ನಡೆಸುತ್ತಿರುವುದು ದ್ವಂದ್ವ ನೀತಿಯಾಗಿದೆ ಎಂದು ಇಮ್ತಿಯಾಜ್ ಮಾನ್ವಿ ಆರೋಪಿಸಿದ್ದಾರೆ.

> ಸಾರ್ವಜನಿಕರು ವ್ಯಾಪಕವಾಗಿ ಅವಲಂಬಿಸಿರುವ ಯುಪಿಐ ಪಾವತಿ ವ್ಯವಸ್ಥೆಗೆ ಶುಲ್ಕ ವಿಧಿಸುವ ಕ್ರಮವನ್ನು ಕೇಂದ್ರ ಸರ್ಕಾರ ಕೂಡಲೇ ಹಿಂಪಡೆಯಬೇಕು. ಡಿಜಿಟಲ್ ವಹಿವಾಟನ್ನು ಉತ್ತೇಜಿಸುವುದರ ಜೊತೆಗೆ ಗ್ರಾಹಕರು ಮತ್ತು ಸಣ್ಣ ವ್ಯಾಪಾರಿಗಳ ಹಿತಾಸಕ್ತಿಗೆ ಆದ್ಯತೆ ನೀಡಬೇಕು.
>
> – ಇಮ್ತಿಯಾಜ್ ಆರ್. ಮಾನ್ವಿ

ದೇಶದ ಡಿಜಿಟಲ್ ವಹಿವಾಟಿನ ಬೆಳವಣಿಗೆಯಿಂದ ಸಾಮಾನ್ಯ ಜನರು ಹಾಗೂ ಸಣ್ಣ ವ್ಯಾಪಾರಿಗಳಿಗೆ ಅನುಕೂಲವಾಗಿದ್ದು, ಇದನ್ನು ಮತ್ತಷ್ಟು ಸರಳ ಮತ್ತು ಕೈಗೆಟುಕುವ ರೀತಿಯಲ್ಲಿ ಮುಂದುವರಿಸಬೇಕಾಗಿದೆ. ಯುಪಿಐ ಪಾವತಿಗೆ ಶುಲ್ಕ ವಿಧಿಸುವ ಕ್ರಮ ಜಾರಿಗೆ ತರದೆ, ಸಾರ್ವಜನಿಕರ ಹಿತದೃಷ್ಟಿಯಿಂದ ಸರ್ಕಾರ ತನ್ನ ನಿರ್ಧಾರವನ್ನು ಮರುಪರಿಶೀಲಿಸಬೇಕು ಎಂದು ಒತ್ತಾಯಿಸಿದ್ದಾರೆ.

## ಅಕ್ಟೋಬರ್ 2ರಂದು ತೆರೆಗೆ

# ಹೊಸತನದ ಸಿನಿಮಾ 'ತ್ರಿಕಾರಂ'

**ವಿಜಯಸಾಕ್ಷಿ ಸುದ್ದಿ, ಹೊಸದುರ್ಗ**

ಸ್ಯಾಂಡಲ್‌ವುಡ್‌ನಲ್ಲಿ ವಿಭಿನ್ನ ಕಥಾಹಂದರ ಹಾಗೂ ಹೊಸತನದೊಂದಿಗೆ ಮೂಡಿಬಂದಿರುವ 'ತ್ರಿಕಾರಂ' ಸಿನಿಮಾ ಅಕ್ಟೋಬರ್ 2ರಂದು ರಾಜ್ಯಾದ್ಯಂತ ತೆರೆಗೆ ಬರಲಿದೆ. ಚಿತ್ರತಂಡದ ಎರಡು ವರ್ಷಗಳ ಸತತ ಪರಿಶ್ರಮದ ಫಲವಾಗಿ ಸಿನಿಮಾ ರೂಪುಗೊಂಡಿದ್ದು, ಪ್ರೇಕ್ಷಕರ ಮನಸ್ಸಿಗೆ ತಟ್ಟುವ ಹಾಗೂ ಭಾವನಾತ್ಮಕವಾಗಿ ಕಾಡುವ ಹಲವು ಅಂಶಗಳು ಚಿತ್ರದಲ್ಲಿವೆ ಎಂದು ಖ್ಯಾತ ಚಲನಚಿತ್ರ ನಟಿ 'ಅಮ್ಮ' ಎಂದೇ ಪ್ರಸಿದ್ಧರಾದ ಪದ್ಮಜಾ ಹೇಳಿದರು.

ಹೊಸದುರ್ಗದಲ್ಲಿ ಇತ್ತೀಚೆಗೆ ನಡೆದ 'ತ್ರಿಕಾರಂ' ಚಿತ್ರದ ಬೃಹತ್ ಕಟೌಟ್ ಅನಾವರಣ, 200 ಬೈಕ್‌ಗಳ ಭರ್ಜರಿ ರ್‍ಯಾಲಿ ಹಾಗೂ ಸಂಜೆ ನಡೆದ ಅದ್ಧೂರಿ ರಸಮಂಜರಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಅಕ್ಟೋಬರ್ 2ರಂದು ಸಿನಿಮಾ ತೆರೆಗೆ ಬರಲಿದ್ದು, ಚಿತ್ರತಂಡಕ್ಕೆ ಶುಭ ಹಾರೈಸಿದರು.

ನಾಯಕ ನಟ ಹರ್ಷವರ್ಧನ್ ಮಾತನಾಡಿ, ನಿರ್ಮಾಪಕ ಜಿ. ಗಣೇಶಮೂರ್ತಿ ಅವರು ಯಾವುದೇ ಕೊರತೆಯಾಗದಂತೆ ಮನಃಪೂರ್ವಕ ಕಾಳಜಿಯಿಂದ ಚಿತ್ರ ನಿರ್ಮಿಸಿದ್ದಾರೆ. ನಿರ್ದೇಶಕ ದಿಲೀಪ್ ಕುಮಾರ್ ಜೆ.ಆರ್. ಅವರು ಅದ್ಭುತ ಕಥೆಯನ್ನು ಹೆಣೆದು, ತಮ್ಮ ಶಕ್ತಿ–ಸಾಮರ್ಥ–ರ್ಯವನ್ನು ಧಾರೆ ಎರೆದು ಸಿನಿಮಾ ಮಾಡಿದ್ದಾರೆ ಎಂದರು.

ನಿರ್ಮಾಪಕರು ಹಾಗೂ ನಿರ್ದೇಶಕರು ತಮ್ಮ ಮೇಲೆ ವಿಶ್ವಾಸವಿಟ್ಟು ದೊಡ್ಡ ಜವಾಬ್ದಾರಿ ನೀಡಿದ್ದು, ಪಾತ್ರವನ್ನು ಪ್ರಾಮಾಣಿಕವಾಗಿ ನಿರ್ವಹಿಸಿದ್ದೇನೆ. ಕನ್ನಡ ಪ್ರೇಕ್ಷಕರು ಚಿತ್ರತಂಡವನ್ನು ಕೈಹಿಡಿಯುತ್ತಾರೆ ಎಂಬ ವಿಶ್ವಾಸವಿದೆ ಎಂದು ಹರ್ಷವರ್ಧನ್ ಹೇಳಿದರು.

ಸದ್ಗುರು ಸಿನಿ ಪ್ರೊಡಕ್ಷನ್ಸ್ ಬ್ಯಾನರ್‌ನಲ್ಲಿ ಜಿ. ಗಣೇಶಮೂರ್ತಿ ನಿರ್ಮಿಸಿರುವ ಚಿತ್ರಕ್ಕೆ ದಿಲೀಪ್ ಕುಮಾರ್ ಜೆ.ಆರ್. ನಿರ್ದೇಶನವಿದೆ. ಯಾಸಿನ್ ಹೊನ್ನಾಳಿ ಛಾಯಾಗ್ರಹಣ, ವಿವೇಕ ಚಕ್ರವರ್ತಿ ಸಂಗೀತ ಹಾಗೂ ಸತೀಶ ಚಂದ್ರಯ್ಯ ಸಂಕಲನ ಮಾಡಿದ್ದಾರೆ.




ರಾಜು ಹಾಗೂ ನವೀನ ಕಲಾ ನಿರ್ದೇಶನ, ಮನು, ಪ್ರದೀಪ್ ಎಂ.ಪಿ., ವಿದ್ಯುತ್ ಶಿವು, ಮಲ್ಲಮ್ಮ ನಿರ್ದೇಶನ ತಂಡದಲ್ಲಿ ಕಾರ್ಯನಿರ್ವಹಿಸಿದ್ದಾರೆ. ಚಂದ್ರು ಸಾಹಸ ನಿರ್ದೇಶನ, ಹೈಟ್ ಮಂಜುನಾಥ್ ಹಾಗೂ ಕಂಬಿ ರಾಜು ನೃತ್ಯ ನಿರ್ದೇಶನ ಮಾಡಿದ್ದಾರೆ.

ಡಾ. ವಿ. ನಾಗೇಂದ್ರಪ್ರಸಾದ್, ಚೇತನ ಕುಮಾರ್ (ಭರ್ಜರಿ), ಚೇತು ಕೇಶವ, ಪ್ರಮೋದ್ ಮರವಂತೆ ಹಾಗೂ ಹರ್ಷವರ್ಧನ್ ಸಾಹಿತ್ಯ ರಚಿಸಿದ್ದಾರೆ. ಹರ್ಷವರ್ಧನ್ ನಾಯಕನಾಗಿ ನಟಿಸಿರುವ ಚಿತ್ರದಲ್ಲಿ ಅದ್ಧೂರಿ ತಾರಾಗಣವಿದೆ.

# ಅಭಿಯಂತರರು ರಾಷ್ಟ್ರ ನಿರ್ಮಾಣದ ಹರಿಕಾರರು



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಅಭಿಯಂತರರು ರಾಷ್ಟ್ರ ನಿರ್ಮಾಣದ ಕಾರ್ಯದಲ್ಲಿ ತಮ್ಮನ್ನು ತೊಡಗಿಸಿಕೊಂಡು ದೇಶದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದ್ದಾರೆ ಎಂದು ಶಾಸಕ ಕೆ. ನೇಮಿರಾಜ್ ನಾಯ್ಕ್ ಹೇಳಿದರು.

ಪಟ್ಟಣದ ಶ್ರೀ ಕನ್ನಿಕಾ ಪರಮೇಶ್ವರಿ ದೇವಸ್ಥಾನದಲ್ಲಿ ಹಗರಿಬೊಮ್ಮನಹಳ್ಳಿ ತಾಲೂಕು ಸಿವಿಲ್ ಕನ್ಸಲ್ಟಿಂಗ್ ಇಂಜಿನಿಯರ್ ಅಸೋಸಿಯೇಷನ್ ವತಿಯಿಂದ ಸರ್ ಎಂ. ವಿಶ್ವೇಶ್ವರಯ್ಯ ಜಯಂತಿ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಭಿಯಂತರರ ವೃತ್ತಿಯು ದೇಶದ ಮೂಲ ಸೌಕರ್ಯ ಹಾಗೂ ಅಭಿವೃದ್ಧಿ ಕಾರ್ಯಗಳಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

ತಮ್ಮ ಜ್ಞಾನ ಮತ್ತು ಕೌಶಲ್ಯವನ್ನು ರಾಷ್ಟ್ರ ನಿರ್ಮಾಣಕ್ಕೆ ಬಳಸುವ ಮೂಲಕ ಅಭಿಯಂತರರು ದೇಶದ ಪ್ರಗತಿಗೆ ಕೊಡುಗೆ ನೀಡುತ್ತಿದ್ದಾರೆ ಎಂದರು.

ಅಸೋಸಿಯೇಷನ್ ಅಧ್ಯಕ್ಷ ಹೆಚ್. ನಾಗೇಂದ್ರ ಕುಮಾರ್ ಮಾತನಾಡಿ, ಶಿಕ್ಷಕರು, ವೈದ್ಯರು, ವಕೀಲರು ಹಾಗೂ ಅಭಿಯಂತರರು ರಾಷ್ಟ್ರದ ಪ್ರಮುಖ ಆಧಾರಸ್ತಂಭಗಳಾಗಿದ್ದಾರೆ.

ಈ ಆಧಾರಸ್ತಂಭಗಳಲ್ಲಿ ಯಾವುದೇ ಒಂದು ದುರ್ಬಲವಾದರೂ ರಾಷ್ಟ್ರ ನಿರ್ಮಾಣದ ಪ್ರಗತಿಗೆ ಹಿನ್ನಡೆಯಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಜನತಾದಳ ಅಧ್ಯಕ್ಷ ಬಾದಾಮಿ ಮೃತ್ಯುಂಜಯ, ನಳಂದ ಸಂಸ್ಥೆಯ ಜಗದೀಶ್, ಇಂಜಿನಿಯರ್ ಮಂಜುನಾಥ್, ಗಂಗಾವತಿ ವಿಜೇತ, ಎನ್. ವೆಂಕಟೇಶ್, ಎಸ್.ಎ. ವಿಶ್ವನಾಥ್, ಆರ್. ಲಿಂಗಾರೆಡ್ಡಿ, ಬಿ. ಶಿವರಾಂ ರೆಡ್ಡಿ, ಬಿ.ಹೆಚ್.ಎಂ. ಅರುಣ್ ಸೇ–ರಿದಂತೆ ಹಲವರು ಉಪಸ್ಥಿತರಿದ್ದರು.

ಇದೇ ವೇಳೆ ಪರಮಪೂಜ್ಯ ಹಾಲಸಿದ್ದೇಶ್ವರ ಸ್ವಾಮಿಗಳು ಹಾಗೂ ಮತ್ತೋರ್ವ ಪರಮಪೂಜ್ಯರು ಆಶೀರ್ವಚನ ನೀಡಿದರು. ಕಾರ್ಯಕ್ರಮದಲ್ಲಿ ಅನೇಕ ವರ್ತಕರು, ಎಲೆಕ್ಟ್ರಿಕಲ್ ಶಾಪ್ ಮಾಲೀಕರು, ಹಾರ್ಡ್‌ವೇರ್ ಅಂಗಡಿ ಮಾಲೀಕರು ಹಾಗೂ ಗಣ್ಯರು ಭಾಗವಹಿಸಿದ್ದರು.

# ಭಾವೈಕ್ಯತೆಯ ಸಂದೇಶ ಸಾರಿದ ಏಕದಂತ ಗಣೇಶೋತ್ಸವ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**


ಪಟ್ಟಣದ ಕೂಡ್ಲಿಗಿ ಸರ್ಕಲ್‌ನ ರಾಮನಗರದಲ್ಲಿ ಏಕದಂತ ಗ್ರೂಪ್ ವತಿಯಿಂದ 11ನೇ ವರ್ಷದ ಗೌರಿ ಗಣೇಶೋತ್ಸವವನ್ನು ಭಕ್ತಿ, ಸಂಸ್ಕೃತಿ, ಸೇವೆ ಹಾಗೂ ಭಾವೈಕ್ಯತೆಯ ಸಂದೇಶದೊಂದಿಗೆ ಆಚರಿಸಲಾಗುತ್ತಿದೆ.

ಶ್ರೀಮತಿ ನಳಿನಿ ಶ್ರೀ ಮಂಗನಹಳ್ಳಿ ಸಂಜೀವಮೂರ್ತಿ ಶ್ರೇಷ್ಠಿ ಅವರ ಬಯಲು ಜಾಗದಲ್ಲಿ ನಡೆಯುತ್ತಿರುವ ಉತ್ಸವದಲ್ಲಿ ಧರ್ಮಸ್ಥಳದ ಶ್ರೀ ಮಂಜುನಾಥ ಸ್ವಾಮಿ ಪ್ರತಿಕೃತಿ ಪ್ರಮುಖ ಆಕರ್ಷಣೆಯಾಗಿದೆ. ಶಿವಮೊಗ್ಗದ 'ಉಮೇಶ್ ಆರ್ಟ್' ಕಲಾವಿದರು ನಿರ್ಮಿಸಿರುವ ಈ ಕಲಾಕೃತಿ ಭಕ್ತರಿಗೆ ಧರ್ಮಸ್ಥಳದ ವಾತಾವರಣವನ್ನು ನೆನಪಿಸುವಂತಿದೆ.

ಉತ್ಸವದ ಅಂಗವಾಗಿ 10 ಸಾವಿರ ಶ್ರೀ ಮಂಜುನಾಥ ಸ್ವಾಮಿ ಲಡ್ಡುಗಳ ಪ್ರಸಾದ ಸಿದ್ಧಪಡಿಸಲಾಗಿದ್ದು, ಭಕ್ತರಿಗೆ ವಿತರಿಸಲಾಗುತ್ತಿದೆ. ಗಣೇಶೋತ್ಸವದ ಸಂದರ್ಭದಲ್ಲಿ ಶಿಸ್ತು ಮತ್ತು ಸಂಘಟನಾ ಒಗ್ಗಟ್ಟಿಗೆ ಒತ್ತು ನೀಡಿರುವ ಏಕದಂತ ಗ್ರೂಪ್, ಸದಸ್ಯರಿಗೆ ವಿಶೇಷ ಡ್ರೆಸ್‌ಕೋಡ್ ಹಾಗೂ ಬ್ಯಾಡ್ಜ್‌ಗಳನ್ನು ರೂಪಿಸಿದೆ.

ಸೆ.20ರಂದು ಜೀ ಕನ್ನಡ ಸರಿಗಮಪ ಖ್ಯಾತ ಕಲಾವಿದರಿಂದ ರಸಮಂಜರಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಏಕದಂತ ಗ್ರೂಪ್ ಮುಖ್ಯಸ್ಥ ಹಾಗೂ ಪುರಸಭೆ ಸದಸ್ಯ ಪವಾಡಿ ಹನುಮಂತಪ್ಪ ತಿಳಿಸಿದ್ದಾರೆ.

# ಗದಗ ಸಂಪೂರ್ಣ ಬರಪೀಡಿತ ಘೋಷಣೆಗೆ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಜಿಲ್ಲೆ ಎಂದು ಘೋಷಿಸಿ ರೈತರ ಕೃಷಿ ಬಿಕ್ಕಟ್ಟಿಗೆ ತಕ್ಷಣ ಪರಿಹಾರ ಕಲ್ಪಿಸಬೇಕು. ಇಲ್ಲವಾದರೆ ಕೆಲವೇ ದಿನಗಳಲ್ಲಿ ಜಿಲ್ಲಾಧಿಕಾರಿಗಳ ಕಚೇ–ರಿಗೆ ಮುತ್ತಿಗೆ ಹಾಕಿ ಹೋರಾಟ ನಡೆಸಲಾಗುವುದು ಎಂದು ಬಿಜೆಪಿ ಗದಗ ಜಿಲ್ಲಾ ರೈತ ಮೋರ್ಚಾ ಎಚ್ಚರಿಸಿದೆ.

ಹವಾಮಾನ ವೈಪರೀತ್ಯ, ಮಳೆಯ ಕೊರತೆ, ಬೆಳೆಹಾನಿ, ಇಳುವರಿ ಕುಸಿತ ಹಾಗೂ ಮಾರುಕಟ್ಟೆ ದರಗಳ ಏರಿಳಿತದಿಂದ ಜಿಲ್ಲೆಯ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ದುಬಾರಿ ಬೀಜ, ರಸಗೊಬ್ಬರಗಳ ಸಮಸ್ಯೆಯ ನಡುವೆ ಮಳೆ ಕೊರತೆಯಿಂದ ಕೃಷಿ ಚಟುವಟಿ–ಕೆಗಳ ಮೇಲೆ ತೀವ್ರ ಪರಿಣಾಮ ಬೀರಿದೆ ಎಂದು ರೈತ ಮೋರ್ಚಾ ಮುಖಂಡರು ತಿಳಿಸಿದ್ದಾರೆ.

ಜಿಲ್ಲೆಯ ಏಳು ತಾಲೂಕುಗಳ ಪೈಕಿ ಒಂದು ತಾಲೂಕನ್ನು ಮಾತ್ರ ಬರಪೀಡಿತ ಎಂದು ಘೋಷಿಸಿರುವುದು ಉಳಿದ ತಾಲೂಕುಗಳ ರೈತರಲ್ಲಿ ಆತಂಕಕ್ಕೆ ಕಾರಣವಾಗಿದೆ ಎಂದು ಅವರು ಹೇಳಿದ್ದಾರೆ. ಉಳಿದ ತಾಲೂಕುಗಳಲ್ಲಿನ ಬರ ಪರಿಸ್ಥಿತಿಯನ್ನು ಸಮಗ್ರವಾಗಿ ಪರಿಶೀಲಿಸಿ, ಗದಗ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಎಂದು ಘೋಷಿಸಿ ರೈತರಿಗೆ ಪರಿಹಾರ ಹಾಗೂ ಅಗತ್ಯ ನೆರವು ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ.

ಸೆ.1ರಂದು ಗದಗಕ್ಕೆ ಭೇಟಿ ನೀಡಿದ್ದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರೈತರೊಂದಿಗೆ ಚರ್ಚಿಸಿ, ಉಳಿದ ತಾಲೂಕುಗಳ ಬರ ಪರಿಸ್ಥಿತಿಯನ್ನು ಪರಿಶೀಲಿಸಿ ವರದಿ ಆಧರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದರು. ರಾಜ್ಯದಲ್ಲಿ 102 ತಾಲೂಕುಗಳನ್ನು ಈಗಾಗಲೇ ಬರಪೀಡಿತ ಎಂದು ಘೋಷಿಸಲಾಗಿದ್ದು, ಇತರ ಪ್ರದೇಶಗಳಲ್ಲಿ ಸಮೀಕ್ಷೆ ನಡೆಯುತ್ತಿದೆ ಎಂದು ಅವರು ತಿಳಿಸಿದ್ದರು.

ಈ ಹಿನ್ನೆಲೆಯಲ್ಲಿ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟ ನಡೆಸುವುದಾಗಿ ಬಿಜೆಪಿ ರೈತ ಮೋರ್ಚಾ ಮುಖಂಡರು ಎಚ್ಚರಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ರೈತ ಮೋರ್ಚಾ ಜಿಲ್ಲಾಧ್ಯಕ್ಷ ಡಿ.ವೈ. ಹುನಗುಂದ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿಗಳಾದ ಮಹೇಶ ಶಿರಹಟ್ಟಿ, ಅಶೋಕ ಬ್ಯಾಹಟ್ಟಿ, ಗದಗ ನಗರ ಅಧ್ಯಕ್ಷ ಶಂಕರ ಕರಿಬಿಷ್ಠಿ, ಗ್ರಾಮೀಣ ಅಧ್ಯಕ್ಷ ನಿಂಗಯ್ಯ ಇಟಗಿಮಠ, ಸುರೇಶ ಮರಳಪ್ಪನವರ, ಬೂದಪ್ಪ ಹಳ್ಳಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# ವಸತಿ ಶಾಲೆಗಳಿಗೆ ಪ್ರತ್ಯೇಕ ನಿರ್ದೇಶನಾಲಯಕ್ಕೆ ಆಗ್ರಹ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ವಿವಿಧ ಇಲಾಖೆಗಳ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳನ್ನು ಸಂಬಂಧಿಸಿದ ಇಲಾಖೆಗಳ ವಶಕ್ಕೆ ನೀಡಿ, ಪ್ರತ್ಯೇಕ ನಿರ್ದೇಶನಾಲಯ ರಚಿಸಿ ಸುಗಮ ಆಡಳಿತಕ್ಕೆ ಅವಕಾಶ ಕಲ್ಪಿಸಬೇಕು ಎಂದು ಮಾಜಿ ಸಭಾಪತಿ ಹಾಗೂ ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ಸರ್ಕಾರವನ್ನು ಒತ್ತಾಯಿಸಿದರು.

ಗದಗ ಜಿ.ಟಿ. ಮಹಾವಿದ್ಯಾಲಯದ ಸಭಾಭವನದಲ್ಲಿ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಗದಗ ಜಿಲ್ಲಾ ವಸತಿ ಶಾಲಾ ನೌಕರರ ಸಂಘದ ಸಂಯುಕ್ತ ಆಶ್ರಯದಲ್ಲಿ ನಡೆದ ಶಿಕ್ಷಕರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಗುರುಕುಲ ಗುರುರತ್ನ–ಗುರುಕುಲ ಸೇವಾರತ್ನ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ವಸತಿ ಶಾಲಾ ನೌಕರರ ಬಹುದಿನಗಳ ಬೇಡಿಕೆಗಳು ಸಮಂಜಸವಾಗಿದ್ದು, ಅವುಗಳನ್ನು ಸರ್ಕಾರದ ಗಮನಕ್ಕೆ ತಂದು ಈಡೇರಿಸಲು ಪ್ರಯತ್ನಿಸುವುದಾಗಿ ಹೇಳಿದರು.



ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ವಸತಿ ಶಾಲೆಗಳಲ್ಲಿ ಹಿಂದುಳಿದ, ದಲಿತ, ಅಲೆಮಾರಿ ಹಾಗೂ ಆರ್ಥಿಕವಾಗಿ ದುರ್ಬಲ ವರ್ಗಗಳ ಮಕ್ಕಳ ಶಿಕ್ಷಣ, ಊಟ ಮತ್ತು ವಸತಿ ಜವಾಬ್ದಾ–ರಿಯನ್ನು ನೌಕರರು ಹಗಲಿರುಳು ನಿರ್ವಹಿಸುತ್ತಿದ್ದಾರೆ. ಅವರ ಜ್ವಲಂತ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ತಿಳಿಸಿದರು.

ಜಿಲ್ಲಾ ವಸತಿ ಶಾಲಾ ನೌಕರರ ಸಂಘದ ಸಂಘಟನಾ ಕಾರ್ಯದರ್ಶಿ ವೀರೇಶ ಕಮ್ಮಾರ ಪ್ರಾಸ್ತಾವಿಕವಾಗಿ ಮಾತನಾಡಿ ನೌಕರರ ವಿವಿಧ ಬೇಡಿಕೆಗಳನ್ನು ಮಂಡಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲೆಯ 35ಕ್ಕೂ ಹೆಚ್ಚು ಬೋಧಕ ಸಿಬ್ಬಂದಿಗೆ ಗುರುಕುಲ ಗುರುರತ್ನ ಪ್ರಶಸ್ತಿ ಹಾಗೂ ಬೋಧಕೇತರ ಸಿಬ್ಬಂದಿಗೆ ಗುರುಕುಲ ಸೇವಾರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಎಂ.ಎಂ. ತುಂಬುರುಮಠ, ಸಂಘದ ರಾಜ್ಯಾಧ್ಯಕ್ಷ ರವಿಚಂದ್ರ ಪಿ.ಎನ್., ರಾಜ್ಯ ಉಪಾಧ್ಯಕ್ಷೆ ಲಕ್ಷ್ಮಿಶೆಟ್ಟಿ, ಪ್ರಧಾನ ಕಾರ್ಯದರ್ಶಿ ನಟರಾಜ್ ಸೇ–ರಿದಂತೆ ವಿವಿಧ ಪದಾಧಿಕಾರಿಗಳು, ಪ್ರಾಚಾರ್ಯರು ಹಾಗೂ ಜಿಲ್ಲೆಯ ವಸತಿ ಶಾಲಾ–ಕಾಲೇಜುಗಳ ನೌಕರರು ಉಪಸ್ಥಿತರಿದ್ದರು.

ಸಂಘದ ಜಿಲ್ಲಾ ಅಧ್ಯಕ್ಷ ಮುತ್ತಪ್ಪ ಕೆಳಗಿನಮನಿ ಅಧ್ಯಕ್ಷತೆ ವಹಿಸಿದ್ದರು. ಕೊಟ್ರೇಶ್ ಅರವಟಿಗೆಮಠ ವಂದಿಸಿದರು.

## ಸಣ್ಣ ಸುದ್ದಿಗಳು

### ಸ್ವಂತ ಉದ್ಯೋಗಕ್ಕೆ 10 ದಿನಗಳ ತರಬೇತಿ

ವಿಜಯಸಾಕ್ಷಿ ಸುದ್ದಿ, ಗದಗ

ಸ್ವಂತ ಉದ್ಯೋಗ ಕೈಗೊಳ್ಳಲು ಆಸಕ್ತಿ ಹೊಂದಿರುವ ಎಲ್ಲ ವರ್ಗದ ಪುರುಷರು ಹಾಗೂ ಮಹಿಳೆಯರಿಗಾಗಿ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಸೆಪ್ಟೆಂಬರ್ 21ರಿಂದ ಅಕ್ಟೋಬರ್ 1ರವರೆಗೆ ಗದಗ ನಗರದಲ್ಲಿ ಆಯೋಜಿಸಲಾಗಿದೆ. ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ ಸಿಡಾಕ್, ಧಾರವಾಡ ಹಾಗೂ ಗದಗ ಇವರ ಸಹಯೋಗದಲ್ಲಿ ನಗರದ ಕುಮಾರವ್ಯಾಸ ಕಾಂಪ್ಲೆಕ್ಸ್ ಹತ್ತಿರದ ದಾರಿ ದೀಪ ಮಹಿಳಾ ವಿವಿಧೋದ್ದೇಶಗಳ ಸಂಸ್ಥೆಯಲ್ಲಿ ತರಬೇತಿ ನಡೆಯಲಿದೆ.

ಸ್ವಂತ ಉದ್ಯೋಗ ಆರಂಭಿಸಲು ಆಸಕ್ತಿ ಹೊಂದಿರುವವರು ತರಬೇತಿಯ ಪ್ರಯೋಜನ ಪಡೆದುಕೊಳ್ಳುವಂತೆ ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಿಡಾಕ್ ಜಿಲ್ಲಾ ಕಚೇರಿ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿಯನ್ನು 77958 55847, 87227 59959 ದೂರವಾಣಿ ಸಂಖ್ಯೆಗಳ ಮೂಲಕ ಸಂಪರ್ಕಿಸಬಹುದು.

### ದಸರಾ ಕ್ರೀಡಾಕೂಟ: ಕ್ರೀಡಾಪಟುಗಳ ನೋಂದಣಿ ಕಡ್ಡಾಯ

ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಸಾಲಿನ ಗದಗ ಜಿಲ್ಲೆಯ ತಾಲೂಕು, ಜಿಲ್ಲಾ ಹಾಗೂ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಗಳನ್ನು ಪುರುಷ ಹಾಗೂ ಮಹಿಳಾ ಕ್ರೀಡಾಪಟುಗಳಿಗಾಗಿ ಆಯೋಜಿಸಲಾಗುತ್ತಿದೆ. ಆಸಕ್ತ ಕ್ರೀಡಾಪಟುಗಳು ಕಡ್ಡಾಯವಾಗಿ "ಜಛಿಚಿಡಿಚಿಥಿಟಥಿಣಾಶಿ.ಟಿ" (ಇಣಣಠಿ://ಜಛಿಚಿಡಿಚಿಥಿಟಥಿಣಾಶಿ.ಟಿ/) ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಹೆಸರು ನೋಂದಾಯಿಸಿಕೊಂಡು ಕ್ರೀಡಾಕೂಟದಲ್ಲಿ ಭಾಗವಹಿಸಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ತಿಳಿಸಿದ್ದಾರೆ.

ತಾಲೂಕು ಮಟ್ಟದಲ್ಲಿ ಅಥ್ಲೆಟಿಕ್ಸ್, ಕಬಡ್ಡಿ, ವಾಲಿಬಾಲ್, ಥ್ರೋಬಾಲ್, ಫುಟ್‌ಬಾಲ್, ಯೋಗಾಸನ ಹಾಗೂ ಖೋಖೋ ಸ್ಪರ್ಧೆಗಳು ನಡೆಯಲಿವೆ. ಜಿಲ್ಲಾ ಮಟ್ಟದಲ್ಲಿ ಅಥ್ಲೆಟಿಕ್ಸ್, ವಾಲಿಬಾಲ್, ಫುಟ್‌ಬಾಲ್, ಖೋಖೋ, ಕಬಡ್ಡಿ, ಬಾಸ್ಕೆಟ್‌ಬಾಲ್, ಕುಸ್ತಿ, ಬ್ಯಾಡ್ಮಿಂಟನ್, ಹಾಕಿ, ಹ್ಯಾಂಡ್‌ಬಾಲ್, ಟೇಬಲ್ ಟೆನ್ನಿಸ್, ಥ್ರೋಬಾಲ್, ಬಾಲ್ ಬ್ಯಾಡ್ಮಿಂಟನ್ ಹಾಗೂ ಯೋಗಾಸನ ಸೇ–ರಿದಂತೆ ವಿವಿಧ ಸ್ಪರ್ಧೆಗಳು ನಡೆಯಲಿವೆ.

ಇದಲ್ಲದೆ ಜಿಲ್ಲಾ ಮಟ್ಟದಲ್ಲಿ ಟೆನ್ನಿಸ್, ನೆಟ್‌ಬಾಲ್, ಈಜು, ಟೆಕ್ವಾಂಡೋ, ಜುಡೋ, ವುಷು ಹಾಗೂ ಕರಾಟೆ ಸ್ಪರ್ಧೆಗಳಿಗೆ ಕ್ರೀಡಾಪಟುಗಳನ್ನು ಆಯ್ಕೆ ಮಾಡಲಾಗುತ್ತದೆ. ವಿಭಾಗ ಮಟ್ಟದಲ್ಲಿ ಅಥ್ಲೆಟಿಕ್ಸ್, ಕಬಡ್ಡಿ, ವಾಲಿಬಾಲ್, ಫುಟ್‌ಬಾಲ್, ಖೋಖೋ, ಬಾಸ್ಕೆಟ್‌ಬಾಲ್, ಕುಸ್ತಿ, ಬ್ಯಾಡ್ಮಿಂಟನ್, ಹಾಕಿ, ಹ್ಯಾಂಡ್‌ಬಾಲ್, ಈಜು, ಟೇಬಲ್ ಟೆನ್ನಿಸ್, ನೆಟ್‌ಬಾಲ್, ಟೆನ್ನಿಸ್, ಥ್ರೋಬಾಲ್, ಯೋಗಾಸನ ಸೇರಿದಂತೆ ವಿವಿಧ ಸ್ಪರ್ಧೆಗಳು ನಡೆಯಲಿವೆ. ಅರ್ಚರಿ, ಫೆನ್ಸಿಂಗ್, ಜಿಮ್ನಾಸ್ಟಿಕ್ಸ್, ಬಾಕ್ಸಿಂಗ್ ಹಾಗೂ ಭಾರ ಎತ್ತುವಿಕೆ ಸೇರಿದಂತೆ ಕೆಲವು ಕ್ರೀಡೆಗಳನ್ನು ವಿಭಾಗ ಮಟ್ಟದಲ್ಲಿ ಆಯ್ಕೆ ಮಾಡಲಾಗುತ್ತದೆ. ತಾಲೂಕು ಮಟ್ಟದ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದವರು ಮತ್ತು ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದ ತಂಡಗಳು ಜಿಲ್ಲಾ ಮಟ್ಟಕ್ಕೆ ಅರ್ಹರಾಗುತ್ತಾರೆ. ಜಿಲ್ಲಾ ಮಟ್ಟದಿಂದ ಇದೇ ರೀತಿಯಲ್ಲಿ ವಿಭಾಗ ಮಟ್ಟಕ್ಕೆ ಹಾಗೂ ವಿಭಾಗ ಮಟ್ಟದ ವಿಜೇತರು ರಾಜ್ಯ ಮಟ್ಟದ ದಸರಾ ಕ್ರೀಡಾಕೂಟಕ್ಕೆ ಆಯ್ಕೆಯಾಗಲಿದ್ದಾರೆ.ಕರ್ನಾಟಕದಲ್ಲಿ ವಾಸಿಸುವ ಕ್ರೀಡಾಪಟುಗಳು ಮಾತ್ರ ಅರ್ಹರಾಗಿದ್ದು, ಸಮವಸ್ತ್ರದಾರಿ ಸೇವೆಗಳ ಕ್ರೀಡಾಪಟುಗಳಿಗೆ ಅವಕಾಶವಿರುವುದಿಲ್ಲ. ಕ್ರೀಡಾಪಟುಗಳು ತಮ್ಮ ಸ್ಥಳೀಯತೆ ದೃಢಪಡಿಸುವ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ: 08372–238345 ಸಂಪರ್ಕಿಸಬಹುದು.

### ದಶಕಕ್ಕೂ ಅಧಿಕ ಕಾಲದ ಪ್ರಯತ್ನಕ್ಕೆ ಫಲ

# ಲಕ್ಷ್ಮೇಶ್ವರ ಪದವಿ ಕಾಲೇಜು ಸರ್ಕಾರದ ವಶಕ್ಕೆ

ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದಲ್ಲಿ 1967ರಲ್ಲಿ ಆರಂಭಗೊಂಡಿದ್ದ ಪುರಸಭೆ ಪದವಿ ಕಲಾ ಮಹಾವಿದ್ಯಾಲಯವನ್ನು ಕರ್ನಾಟಕ ಸರ್ಕಾರದ ಅಧೀನಕ್ಕೆ ಹಸ್ತಾಂತರಿಸುವ ನಿಟ್ಟಿನಲ್ಲಿ ಕಳೆದ ಒಂದು ದಶಕಕ್ಕೂ ಅಧಿಕ ಕಾಲದಿಂದ ನಡೆದ ಪ್ರಯತ್ನಕ್ಕೆ ಇದೀಗ ಫಲ ದೊರೆತಿದೆ. ಕಾಲೇಜನ್ನು ಸರ್ಕಾರದ ವಶಕ್ಕೆ ಪಡೆಯುವ ಆದೇಶ ಬುಧವಾರ ಅಧಿಕೃತವಾಗಿ ಪ್ರಕಟವಾಗಿದ್ದು, ಪಟ್ಟಣದ ಜನತೆ ಹಾಗೂ ಕಾಲೇಜಿನ ಹಳೆ ವಿದ್ಯಾರ್ಥಿಗಳಲ್ಲಿ ಸಂತಸ ಮೂಡಿಸಿದೆ.

ಆದೇಶದ ಪ್ರತಿ ಕೈ ಸೇರಿದ ತಕ್ಷಣ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಅವರ ನೇತೃತ್ವದಲ್ಲಿ ಮುಖಂಡರು, ಕಾಲೇಜಿನ ಪ್ರಾಚಾರ್ಯರು ಹಾಗೂ ಉಪನ್ಯಾಸಕರು ಐತಿಹಾಸಿಕ ಶ್ರೀ ಸೋಮೇಶ್ವರ ದೇವಸ್ಥಾನಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಸಿಹಿ ಹಂಚಿಕೊಂಡು ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಲಕ್ಷ್ಮೇಶ್ವರ ಪಟ್ಟಣದ ಅಭಿವೃದ್ಧಿಯ ಹಲವು ಪ್ರಮುಖ ಕಾರ್ಯಗಳಲ್ಲಿ ಪುರಸಭೆ ಪದವಿ ಕಾಲೇಜನ್ನು ಸರ್ಕಾರಕ್ಕೆ ಹಸ್ತಾಂತರಿಸುವ ಪ್ರಯತ್ನವೂ ಪ್ರಮುಖವಾಗಿದೆ. ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ ಹಾಗೂ ಹಾಲಿ ಶಾಸಕ ಡಾ. ಚಂದ್ರು ಲಮಾಣಿ ಅವರು ಕಾಲೇಜಿನ ಹಸ್ತಾಂತರಕ್ಕಾಗಿ ವಿಶೇಷ ಆಸಕ್ತಿ ವಹಿಸಿ ಕೆಲಸ ಮಾಡಿದ್ದಾರೆ ಎಂದರು.

ಪುರಸಭೆಯ ಮೂಲಕ ಕಾಲೇಜಿನ ಆಡಳಿತ ನಿರ್ವಹಿಸುವುದು ಕಷ್ಟವಾಗುತ್ತಿದ್ದ ಹಿನ್ನೆಲೆಯಲ್ಲಿ ಹಾಗೂ ಲಕ್ಷ್ಮೇಶ್ವರ ತಾಲೂಕು ಕೇಂದ್ರವಾಗಿ ಘೋಷಣೆಯಾಗಿರುವುದ–ರಿಂದ ಕಾಲೇಜಿನಲ್ಲಿ ಹೊಸ ಹೊಸ ಕೋರ್ಸ್‌ಗಳನ್ನು ಆರಂಭಿಸಿ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳ ಬಡ ವಿದ್ಯಾರ್ಥಿಗಳಿಗೆ ಹೆಚ್ಚಿನ ಅವಕಾಶ ಕಲ್ಪಿಸುವ ಉದ್ದೇಶದಿಂದ ಕಾಲೇಜಿನ ಚರ ಮತ್ತು ಸ್ಥಿರಾಸ್ತಿಗಳನ್ನು ಸರ್ಕಾರದ ಅಧೀನಕ್ಕೆ ನೀಡಲು ಆಡಳಿತ ಮಂಡಳಿ ಠರಾವು ಮಾಡಿತ್ತು ಎಂದು ತಿಳಿಸಿದರು.

> ಸರ್ಕಾರಿ ಕಾಲೇಜಿನ ಸೌಲಭ್ಯದಿಂದ ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳಿಗೆ ಹೆಚ್ಚಿನ ಅವಕಾಶ ದೊರೆಯುವಂತಾಗಲಿ.
> – ಜಿ.ಎಸ್. ಗಡ್ಡದೇವರಮಠ, ಮಾಜಿ ಶಾಸಕ

ಕಾಲೇಜಿನ ಕಟ್ಟಡ ನಿರ್ಮಾಣದ ಸಂದರ್ಭದಲ್ಲಿ ಅಂದಿನ ಪುರಸಭೆ ಅಧ್ಯಕ್ಷರಾಗಿದ್ದ ದಿ. ನರಸಿಂಹ ಹೊಂಬಳ ಹಾಗೂ ಆಡಳಿತ ಮಂಡಳಿಯವರು ನಿಸ್ವಾರ್ಥವಾಗಿ ಶ್ರಮಿಸಿ ಕಟ್ಟಡ ನಿರ್ಮಾಣ ಮಾಡಿದ್ದನ್ನು ಸ್ಮರಿಸಿದ ಅವರು, ಸರ್ಕಾರದ ಪದವಿ ಕಾಲೇಜಿನ ಸೌಲಭ್ಯವನ್ನು ಎಲ್ಲರೂ ಸದುಪಯೋಗಪಡಿಸಿಕೊಳ್ಳುವಂತಾಗಬೇಕು. ಕಾಲೇಜನ್ನು ಸರ್ಕಾರಕ್ಕೆ ಹಸ್ತಾಂತ–ರಿಸುವಲ್ಲಿ ಶ್ರಮಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಜಿ.ವಿ. ಪಾಟೀಲ, ಪದ್ಮರಾಜ ಪಾಟೀಲ, ಪ್ರೊ. ಬಿ.ಎಸ್. ಉಗ್ರದ, ಪ್ರಾಚಾರ್ಯ ಎನ್.ವಿ. ನಾಗಶೆಟ್ಟಿ, ಶರಣು ಗೋಡಿ, ಮಹೇಶ ಲಮಾಣಿ (ಅಕ್ಕಿಗುಂದ), ಸೋಮಣ್ಣ ಬೆಟಗೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಪುರಸಭೆಯ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸ್ಥಾಯಿ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರು, ಮುಖ್ಯಾಧಿಕಾರಿ ಪರಶುರಾಮ ಗುಡದಾರಿ, ಸಿಬ್ಬಂದಿ ಮತ್ತು ಕಾಲೇಜಿನ ಹಳೆ ವಿದ್ಯಾರ್ಥಿಗಳು ಸರ್ಕಾರದ ನಿರ್ಧಾರಕ್ಕೆ ಸಂತಸ ವ್ಯಕ್ತಪಡಿಸಿದ್ದಾರೆ.

### ಬಾಕಿ ಕೂಲಿ, ಕುಡಿಯುವ ನೀರು ಸೇರಿ ಹಲವು ಸಮಸ್ಯೆಗಳಿಗೆ ಪರಿಹಾರಕ್ಕೆ ಆಗ್ರಹ

# ಬನ್ನಿಕಲ್ ಪಂಚಾಯಿತಿಗೆ ಖಾಯಂ ಪಿಡಿಒ ನೇಮಿಸಿ

ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ



ಬನ್ನಿಕಲ್ ಗ್ರಾಮ ಪಂಚಾಯಿತಿಯಲ್ಲಿ ಕಳೆದ ಐದು ವರ್ಷಗಳಿಂದ ಖಾಯಂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಇಲ್ಲದಿರುವುದರಿಂದ ಸ್ಥಳೀಯ ಆಡಳಿತ ಹಾಗೂ ಸಾರ್ವಜನಿಕರ ಸಮಸ್ಯೆಗಳ ಪರಿಹಾರಕ್ಕೆ ತೊಂದರೆಯಾಗುತ್ತಿದೆ ಎಂದು ಆರೋಪಿಸಿ ಪಂಚಾಯಿತಿ ಕಾರ್ಮಿಕರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಮನವಿ ಸಲ್ಲಿಸಿದ್ದಾರೆ.

ಜಿಲ್ಲಾ ಸಂಚಾಲಕಿ ಅಕ್ಕಮಹಾದೇವಿ ಅವರ ನೇತೃತ್ವದಲ್ಲಿ ಸಲ್ಲಿಸಿದ ಮನವಿಯಲ್ಲಿ, ಸರಕಾರದ ಆದೇಶದಂತೆ ಖಾಯಂ ಪಿಡಿಒ ಇದ್ದರೂ ಅವರು ಬನ್ನಿಕಲ್ ಪಂಚಾಯಿತಿಯಲ್ಲಿ ಸೇವೆ ಸಲ್ಲಿಸುತ್ತಿಲ್ಲ. ಬೇರೆ ತಾಲೂಕಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ತಾಲೂಕು ಮಟ್ಟದ ಅಧಿಕಾರಿಗಳು ಹೇಳುತ್ತಿದ್ದಾರೆ. ವರ್ಷದಲ್ಲಿ 3–4 ಅಧಿಕಾರಿಗಳು ಬದಲಾಗುತ್ತಿರುವುದ–ರಿಂದ ಪಂಚಾಯಿತಿಯ ಆಡಳಿತವನ್ನು ಸಮರ್ಪಕವಾಗಿ ನಿರ್ವಹಿಸುವುದು ಕಷ್ಟವಾಗಿದ್ದು, ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಲು ಸಾಧ್ಯವಾಗುತ್ತಿಲ್ಲ ಎಂದು ಕಾರ್ಮಿಕರು ತಿಳಿಸಿದ್ದಾರೆ.

ಪಂಚಾಯಿತಿಗೆ ಕೂಡಲೇ ಖಾಯಂ ಪಿಡಿಒ ನೇಮಿಸುವುದರ ಜೊತೆಗೆ, ಕಾರ್ಮಿಕರು ದುಡಿದ ಕೂಲಿ ಹಣವನ್ನು ಕೂಲಿಭತ್ಯೆ ಸೇರಿದಂತೆ ಬಾಕಿ ಉಳಿದಿದ್ದರೆ ಪಾವತಿಸಬೇಕು ಎಂದು ಒತ್ತಾಯಿಸಿದ್ದಾರೆ.

ಕೆರೆಯ ಹೂಳು ತೆರವುಗೊಳಿಸಿ ಹೊರ ಸಾಗಿಸಿದ ಟ್ರ್ಯಾಕ್ಟರ್‌ಗಳ ಬಿಲ್ ಹಣವೂ ಕಳೆದ ಒಂದು ವರ್ಷದಿಂದ ಪಾವತಿಯಾಗಿಲ್ಲ. ಅದನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

> ಐದು ವರ್ಷಗಳಿಂದ ಖಾಯಂ ಪಿಡಿಒ ಇಲ್ಲದಿರುವುದರಿಂದ ಪಂಚಾಯಿತಿ ವ್ಯಾಪ್ತಿಯ ಹಲವು ಸಮಸ್ಯೆಗಳು ಬಗೆಹ–ರಿಯದೆ ಉಳಿದಿವೆ. ಕಾರ್ಮಿಕರ ಬಾಕಿ ಹಣ ಪಾವತಿ, ಹೆಚ್ಚುವರಿ ಉದ್ಯೋಗ, ಕುಡಿಯುವ ನೀರು, ಅಂಗನವಾಡಿ ಸೇರಿದಂತೆ ಎಲ್ಲ ಬೇಡಿಕೆಗಳನ್ನು ಕೂಡಲೇ ಈಡೇರಿಸಿ, ಬನ್ನಿಕಲ್ ಪಂಚಾಯಿತಿಗೆ ಖಾಯಂ ಪಿಡಿಒ ನೇಮಿಸಬೇಕು.
> – ಅಕ್ಕಮಹಾದೇವಿ, ಜಿಲ್ಲಾ ಸಂಚಾಲಕಿ

ಮೇಟ್ಸ್‌ಗಳಿಗೆ ನೀಡಬೇಕಾದ ಮೇಟ್ಸ್ ಚಾರ್ಜ್‌ಗಳನ್ನು ಪಾವತಿಸಬೇಕು. ಬರಗಾಲದ ಹಿನ್ನೆಲೆಯಲ್ಲಿ ಕಾರ್ಮಿಕ–ರಿಗೆ 100 ದಿನಗಳ ಹೆಚ್ಚುವರಿ ಕೆಲಸ ಕಲ್ಪಿಸಬೇಕು. ವಸತಿ ಹಾಗೂ ನಿವೇಶನ ರಹಿತರ ಹೆಸರುಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಿ ಸೌಲಭ್ಯ ಕಲ್ಪಿಸಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಪಂಚಾಯಿತಿ ವ್ಯಾಪ್ತಿಯ ಕುಡಿಯುವ ನೀರಿನ ಸಮಸ್ಯೆ ಇರುವ ವಾರ್ಡ್‌ಗಳಿಗೆ ಪಿಡಿಒ ಭೇಟಿ ನೀಡಿ ಸಮಸ್ಯೆ ಪರಿಹ–ರಿಸಬೇಕು. ಮೋರಿಗೇರಿ ದಾರಿ (ಸ್ಮಶಾನ) ಹಾಗೂ ಗ್ರಾಮ ಪಂಚಾಯಿತಿ–ಹಡಗಲಿ ರಸ್ತೆಯಲ್ಲಿ ನೀರಿನ ತೊಟ್ಟಿ ನಿರ್ಮಿಸಬೇಕು ಎಂದು ಒತ್ತಾಯಿಸಿದ್ದಾರೆ.

ನವಗ್ರಾಮದಲ್ಲಿ ಸುಮಾರು 120 ಮನೆಗಳಿದ್ದು, 40 ಮಕ್ಕಳು ಅಂಗನವಾಡಿ ಸೌಲಭ್ಯಕ್ಕಾಗಿ ರಸ್ತೆ ದಾಟಿ ಬೇರೆಡೆಗೆ ತೆರಳಬೇಕಾಗಿದೆ.

ಈ ಮಾರ್ಗದಲ್ಲಿ ವಾಹನ ಸಂಚಾರ ಹೆಚ್ಚಿರುವುದರಿಂದ ಮಕ್ಕಳಿಗೆ ತೊಂದರೆಯಾಗುತ್ತಿದೆ. ಹೀಗಾಗಿ ನವಗ್ರಾಮದಲ್ಲೇ ಅಂಗನವಾಡಿ ಕೇಂದ್ರ ಆರಂಭಿಸಬೇಕು ಎಂದು ಕಾರ್ಮಿಕರು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಕಾರ್ಮಿಕರಾದ ಪೂಜಾರ್ ಜಂಬಣ್ಣ, ಮಲ್ಲಿಕಾರ್ಜುನ, ಶ್ವೇತ, ಅನಿಲಕುಮಾರ್, ಮಹದೇವಪ್ಪ, ನಾಗರಾಜ, ಕೊಟ್ರೇಶ್, ಶಂಕರನಾಗ, ಹಳ್ಳಿ ಮರುತೇಶಪ್ಪ, ಮುದ್ದಿ ಬಸವರಾಜ, ಇಟ್ಟಿಗಿ ಬಸ್ಸಣ್ಣ, ಅಂಬಿಗ ಅಕ್ಕಮ್ಮ, ಅಂಬಣ್ಣ ಬೆಸ್ತರು, ಮಂಜಮ್ಮ, ಎಚ್. ಸರೋಜ, ಪವಿತ್ರ, ಗಂಗಮ್ಮ, ಭೀಮಮ್ಮ, ಸತ್ಯಮ್ಮ, ರಾಮಜ್ಜ, ಈಶಪ್ಪ ಬರೀಕ್ರು ಸೇ–ರಿದಂತೆ ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆ ಕಾರ್ಯಕರ್ತರಾದ ರತ್ನಮ್ಮ, ದುರುಗಮ್ಮ ಹಾಗೂ ಕಾರ್ಮಿಕ ಸಂಘದ ಇತರರು ಇದ್ದರು.

### ಗುರುಗಳನ್ನು ಕಂಡು ತುಂಬಿದ ಕಣ್ಣಾಲಿ; ಮತ್ತೆ ಮರುಕಳಿಸಿದ ಬಾಲ್ಯ

# 25 ವರ್ಷಗಳ ಬಳಿಕ ಗೆಳೆಯರ ಸಮಾಗಮ




ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಒಂದೇ ಬೆಂಚಿನಲ್ಲಿ ಕುಳಿತು ಅಕ್ಷರ ಕಲಿತವರು ಒಂದೇ ಮೈದಾನದಲ್ಲಿ ಓಡಿ–ಆಡಿ ಬಾಲ್ಯ ಕಳೆದವರು ಶಿಕ್ಷಕರ ಗದ–ರಿಕೆಗೆ ಒಟ್ಟಾಗಿ ತಲೆತಗ್ಗಿಸಿದವರು ಶಾಲೆಯ ಗಂಟೆಯ ಸದ್ದಿಗೆ ತರಗತಿಗೆ ಓಡಿದವರು. ಕಾಲದ ಓಟದಲ್ಲಿ ಬದುಕಿನ ದಾರಿಗಳು ಬೇರೆಯಾದರೂ, ಶಾಲೆಯ ನೆನಪು ಎಂಬ ಅದೃಶ್ಯ ನಂಟು 25 ವರ್ಷಗಳ ಬಳಿಕ ಎಲ್ಲರನ್ನೂ ಮತ್ತೆ ಒಂದೇ ಅಂಗಳಕ್ಕೆ ಕರೆತಂದಿತು.

ಗೆಳೆಯರ ಭೇಟಿಯ ಸಂತಸ, ಗುರುಗಳನ್ನು ಕಂಡ ಭಾವುಕತೆ ಹಾಗೂ ಬಾಲ್ಯದ ನೆನಪುಗಳ ಸಮ್ಮಿಲನಕ್ಕೆ ನರೇಗಲ್ಲ ಸಾಕ್ಷಿಯಾಯಿತು.

ಇಲ್ಲಿನ ಶ್ರೀ ಅನ್ನದಾನ ವಿಜಯ ಬಾಲಕರ ಪ್ರೌಢಶಾಲೆಯ 2001–02ನೇ ಸಾಲಿನ ಹಳೆಯ ವಿದ್ಯಾರ್ಥಿಗಳ ಸ್ನೇಹ ಸಮ್ಮೇಳನ ಹಾಗೂ ಗುರುವಂದನಾ ಕಾರ್ಯಕ್ರಮ ಶ್ರೀ ಅನ್ನದಾನೇಶ್ವರ ಶಿವಾನುಭವ ಮಂಟಪದಲ್ಲಿ ಆತ್ಮೀಯ ಹಾಗೂ ಭಾವನಾತ್ಮಕ ವಾತಾವರಣದಲ್ಲಿ ನಡೆಯಿತು.

25 ವರ್ಷಗಳ ಬಳಿಕ ಪರಸ್ಪರ ಮುಖಾಮುಖಿಯಾದ ಹಳೆಯ ಗೆಳೆಯರು ಒಬ್ಬರನ್ನೊಬ್ಬರು ಅಪ್ಪಿಕೊಂಡು, ಬಾಲ್ಯದ ದಿನಗಳನ್ನು ಮೆಲುಕು ಹಾಕಿದರು. 'ನನ್ನ ನೆನಪಿದೆಯಾ?', 'ಅಂದು ಮಾಡುತ್ತಿದ್ದ ಕಿತಾಪತಿ ನೆನಪಿದೆಯಾ?', 'ನಮ್ಮ ಬೆಂಚು ಎಲ್ಲಿತ್ತು ಗೊತ್ತಾ?' ಎಂಬ ಆತ್ಮೀಯ ಮಾತುಗಳು ಮಂಟಪದಲ್ಲಿ ನಗುವಿನ ಅಲೆ ಎಬ್ಬಿಸಿದವು. ಕೆಲವರು ಹಳೆಯ ಕಿತಾಪತಿಗಳನ್ನು ನೆನಪಿಸಿಕೊಂಡು ನಕ್ಕರೆ, ಮತ್ತೆ ಕೆಲವರ ಕಣ್ಣಂಚಿನಲ್ಲಿ ಸಂತಸದ ಆನಂದಭಾಷ್ಪ ಜಿನುಗಿತು.

ವಿದ್ಯಾರ್ಥಿ ಜೀವನಕ್ಕೆ ದಿಕ್ಕು ತೋರಿದ ಮುಖ್ಯ ಶಿಕ್ಷಕರಾದ ಎಸ್.ಎನ್. ಹೂಲಗೇರಿ, ಎಂ.ಬಿ. ಸಜ್ಜನರ, ಎಂ.ವಿ. ವೀರಾಪುರ ಹಾಗೂ ನಿವೃತ್ತ ಮುಖ್ಯ ಶಿಕ್ಷಕ ಎಸ್.ಎಚ್. ಅಬ್ಬಿಗೇರಿ ಅವರನ್ನು ಹಳೆಯ ವಿದ್ಯಾರ್ಥಿಗಳು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು.

ನಿವೃತ್ತ ಶಿಕ್ಷಕರಾದ ಕೆ.ಪಿ. ರಾಠೋಡ, ಎಚ್.ಎಂ. ರತ್ನಮ್ಮ, ಆರ್.ಎಂ. ನದಾಫ, ಎಸ್.ಎನ್. ಬ್ಯಾಡಗಿ, ಟಿ.ಬಿ. ಆಡೂರ, ಎ.ಎಂ. ರಾಠೋಡ, ಆರ್.ಕೆ. ರಡೇರ, ಎಂ.ವಿ. ಬಿಂಗಿ, ಎಲ್.ಎನ್. ನಾಯಕ, ಆರ್.ಎಂ. ಶಿಳ್ಳಿನ, ಐ. ಜ್ಞಾನೇಶ್ವರಿ, ಎಂ.ಎಂ. ಗುಗ್ಗರಿ, ಎಸ್.ಕೆ. ಗಾಣಿಗೇರ ಹಾಗೂ ಎಸ್.ಬಿ. ಬೂದಿಹಾಳ ಸೇರಿದಂತೆ ಶಿಕ್ಷಕರನ್ನು ಗೌರವಿಸಲಾಯಿತು.

ಶಾಲೆಯ ಪಾಠದ ಜತೆಗೆ ವಿದ್ಯಾರ್ಥಿಗಳ ಬದುಕಿನ ಹಿಂದೆ ನಿಂತು ಸೇವೆ ಸಲ್ಲಿಸಿದ ಶಿಕ್ಷಕೇತರ ಸಿಬ್ಬಂದಿಯನ್ನೂ, ಹಳೆಯ ವಿದ್ಯಾರ್ಥಿಗಳು ಮರೆಯಲಿಲ್ಲ. ನಿವೃತ್ತ ಕರಣಿಕರಾದ ಎಸ್.ಕೆ. ಪಾಟೀಲ, ಎಚ್.ಟಿ. ಬಂಡಿವಡ್ಡರ, ನಿವೃತ್ತ ಅಟೆಂಡರ್ ಬಿ.ಬಿ. ಮಡಿವಾಳರ, ಸಿಪಾಯಿಗಳಾದ ಡಿ. ಎಸ್. ಬಂಡಿವಡ್ಡರ ಹಾಗೂ ಡಿ.ವಿ. ಕೋಳಿವಾಡ, ಕಂಪ್ಯೂಟರ್ ಆಪರೇಟರ್ ಎ.ಜೆ. ಹಿರೇಮಠ ಮತ್ತು ಕಂಪ್ಯೂಟರ್ ಶಿಕ್ಷಕಿ ಶ್ರೀದೇವಿ ಹೊಸಮಠ ಅವರನ್ನು ಸಹ ಗೌರವಿಸಲಾಯಿತು.

> ಹಳೆಯ ವಿದ್ಯಾರ್ಥಿಗಳು ಇಷ್ಟೊಂದು ವರ್ಷಗಳ ಬಳಿಕವೂ ತಮ್ಮ ಶಾಲೆ, ಗುರುಗಳು ಹಾಗೂ ಶಾಲೆಯ ಸಿಬ್ಬಂದಿಯನ್ನು ನೆನಪಿಸಿಕೊಂಡು ಒಂದಾಗಿ ಗೌರವ ಸಲ್ಲಿಸಿರುವುದು ಸಂತಸದ ಸಂಗತಿ. ಇಂತಹ ಸಮ್ಮೇಳನಗಳು ಹಳೆಯ ನೆನಪುಗಳನ್ನು ಮಾತ್ರ ಮರುಕಳಿಸುವುದಲ್ಲ; ಮುಂದಿನ ಪೀಳಿಗೆಗೂ ಗುರು-ಶಿಷ್ಯರ ಬಾಂಧವ್ಯದ ಮೌಲ್ಯವನ್ನು ಪರಿಚಯಿಸುತ್ತವೆ.
> – ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು

ಸನ್ಮಾನದ ವೇಳೆ ಶಿಕ್ಷಕರು ತಮ್ಮ ಹಳೆಯ ವಿದ್ಯಾರ್ಥಿಗಳನ್ನು ಹೆಸರು ಹಿಡಿದು ಗುರುತಿಸಿ ಮಾತನಾಡಿದಾಗ, ವರ್ಷಗಳ ಹಿಂದಿನ ತರಗತಿಯ ದೃಶ್ಯಗಳು ಮತ್ತೆ ಕಣ್ಣಮುಂದೆ ಬಂದವು. ಹಳೆಯ ಗೆಳೆಯರು ಪರಸ್ಪರ ಕುಟುಂಬ, ಉದ್ಯೋಗ ಹಾಗೂ ಬದುಕಿನ ಪಯಣದ ಕುರಿತು ವಿಚಾರಿಸಿಕೊಂಡು ಸಂತಸ ಹಂಚಿಕೊಂಡರು. ಅಗಲಿದ ಗೆಳೆಯರು ಹಾಗೂ ಶಿಕ್ಷಕರನ್ನು ಸ್ಮರಿಸಿದ ಸಂದರ್ಭಗಳು ಕಾರ್ಯಕ್ರಮಕ್ಕೆ ಮತ್ತಷ್ಟು ಭಾವುಕತೆ ತುಂಬಿದವು.

ಹಾಲಕೆರೆ–ಗಂಜಿಹಾಳ ಅನ್ನದಾನೇಶ್ವರ ಸಂಸ್ಥಾನಮಠದ ಪೀಠಾಧಿಪತಿ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದ್ದರು. ಡಾ. ಕೆ.ಬಿ. ಧನ್ನೂರ ಕಾರ್ಯಕ್ರಮ ಉದ್ಘಾಟಿಸಿದರು. ಆಡಳಿತ ಮಂಡಳಿ ಸದಸ್ಯರಾದ ಬಸವರಾಜ ಕಳಕಣ್ಣವರ, ಷಣ್ಮುಖಪ್ಪ ಶಿದ್ನೇಕೊಪ್ಪ ಹಾಗೂ ಬಸವರಾಜ ಹೊನ್ನವಾಡ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಗೀತಾ ಬೋಪಳಾಪುರ ಪ್ರಾರ್ಥಿಸಿದರು. ರವಿ ಮುಗಳಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ರವಿ ಹೊಸಮನಿ ಸ್ವಾಗತಿಸಿದರು. ಬಿ.ಎಸ್. ಕಳಕಣ್ಣವರ ನಿರೂಪಿಸಿದರು. ಹಸನಸಾಬ ಕೊಪ್ಪಳ ಸನ್ಮಾನ ಕಾರ್ಯಕ್ರಮ ನಿರ್ವಹಿಸಿದರು. ಶರಣಪ್ಪ ಆನೆಹೊಸೂರು ವಂದಿಸಿದರು.

ಹಳೆಯ ವಿದ್ಯಾರ್ಥಿಗಳಾದ ರಮೇಶ್ ಕೋಲಕಾರ, ಶಕ್ತಿಪ್ರಸಾದ್ ಮೇಟಿ, ನೀಲಪ್ಪ ಗದ್ದಿ, ಯಶವಂತ ಬೇವಿನಕಟ್ಟಿ, ಪಂಪಾಪತಿ ಸಿಂಗನಾಳ, ಗಣೇಶ್ ಗ್ರಾಮಪುರೋಹಿತ್, ಮಾರುತಿ ಕರಮಡಿ, ಜಯಶಂಕರ್ ಬಡಿಗೇರ, ಶಿವಾನಂದ ಪಾಯಪ್ಪಗೌಡ್ರು, ಶಿವಕುಮಾರ್ ರಾಠೋಡ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

**ಕಾಲ ಬದಲಾದರೂ ಬಂಧ ಬದಲಾಗದು**

25 ವರ್ಷಗಳ ಅಂತರದ ಬಳಿಕ ನಡೆದ ಈ ಸ್ನೇಹ ಸಮ್ಮೇಳನ ಕೇವಲ ಹಳೆಯ ವಿದ್ಯಾರ್ಥಿಗಳ ಭೇಟಿಯಾಗಿರಲಿಲ್ಲ. ಅದು ಬಾಲ್ಯದ ನೆನಪುಗಳಿಗೆ ಮತ್ತೆ ಜೀವ ತುಂಬಿದ, ಗುರು–ಶಿಷ್ಯರ ಬಾಂಧವ್ಯದ ಆಳವನ್ನು ನೆನಪಿಸಿದ ಅಪರೂಪದ ಕ್ಷಣವಾಗಿತ್ತು. ಬದುಕಿನ ದಾರಿಗಳು ಬೇರೆಯಾದರೂ ಒಂದೇ ಶಾಲೆಯ ಅಂಗಳದಲ್ಲಿ ಬೆಳೆದ ಸ್ನೇಹದ ಬಂಧ ಉಳಿದೇ ಇರುತ್ತದೆ ಎಂಬುದನ್ನು ಸಮ್ಮೇಳನ ಸಾರಿತು.

### ವಚನ ಸಾಹಿತ್ಯದಲ್ಲಿ ವಿಜ್ಞಾನದ ಅಂಶಗಳಿವೆ




ವಿಜಯಸಾಕ್ಷಿ ಸುದ್ದಿ, ಗದಗ

ವಚನ ಸಾಹಿತ್ಯದಲ್ಲಿ ವಿಜ್ಞಾನದ ಹಲವು ಅಂಶಗಳಿದ್ದು, ಬಸವಧರ್ಮವು ಸಮಾಜದಲ್ಲಿ ಕಡೆಗಣಿಸಲ್ಪಟ್ಟವರು, ಶೋಷಿತರು, ತುಳಿತಕ್ಕೊಳಗಾದವರು, ಮಹಿಳೆಯರು, ದೀನ–ದಲಿತರು ಹಾಗೂ ಸಾಮಾನ್ಯ ಜನರ ಉದ್ಧಾರಕ್ಕೆ ದಾರಿ ತೋರಿದ ಧರ್ಮವಾಗಿದೆ ಎಂದು ಶರಣ ಸಾಹಿತಿ ಹಾಗೂ ವಿದ್ವಾಂಸ ಪ್ರೊ. ಚಂದ್ರಶೇಖರ ವಸ್ತ್ರದ ಹೇಳಿದರು.

ಬಸವದಳ, ಬಸವಕೇಂದ್ರ, ಜಾಗತಿಕ ಲಿಂಗಾಯತ ಮಹಾಸಭಾ ಹಾಗೂ ಲಿಂಗಾಯತ ಪ್ರಗತಿಶೀಲ ಸಂಘದ ಸಂಯುಕ್ತ ಆಶ್ರಯದಲ್ಲಿ ನಡೆದ ವಚನ ಶ್ರಾವಣ ಮಂಗಲೋತ್ಸವದ ಅಂಗವಾಗಿ ಬಸವದಳದ 1715ನೇ ಶರಣ ಸಂಗಮದಲ್ಲಿ ಶರಣ ಅಮುಗಿದೇವಯ್ಯನವರ ವಚನ ಕುರಿತು ವಚನ ನಿರ್ವಚನ ನೀಡಿದರು. ಶಿವನ ಸ್ಮರಣೆ ಕೇವಲ ಬಾಯಿಮಾತಿನ ನೆನೆಯುವಿಕೆಯಾಗದೆ, ಮನಸ್ಸಿನ ಧ್ಯಾನವಾಗಿ ರೂಪುಗೊಳ್ಳಬೇಕು. ನಿರಂತರ ಧ್ಯಾನ ಹಾಗೂ ಆಚರಣೆಯ ಮೂಲಕ ಗೋಚರದಿಂದ ಅಗೋಚರದ ಕಡೆಗೆ, ಸ್ಥಾವರದಿಂದ ಜಂಗಮದ ಕಡೆಗೆ ಸಾಗುವ ಮಾರ್ಗವನ್ನು ವಚನಕಾರರು ತೋರಿಸಿದ್ದಾರೆ ಎಂದು ವಿವರಿಸಿದರು.

ನಗರಸಭಾ ಸದಸ್ಯೆ ವಿದ್ಯಾವತಿ ಗಡಗಿ ಮಾತನಾಡಿ, ಬಸವೇಶ್ವರರು ಮಹಿಳೆಯರಿಗೆ ಸಮಾನತೆ ಹಾಗೂ ಸ್ವಾತಂತ್ರ್ಯದ ಮೂಲಕ ಸಮಾಜದಲ್ಲಿ ಉನ್ನತ ಸ್ಥಾನ ಕಲ್ಪಿಸಿದರು ಎಂದರು. ನ್ಯಾಯವಾದಿ ಬಸವರಾಜ ಸಂಶಿ ಮಾತನಾಡಿ, ಯುವಕರಲ್ಲಿ ಬಸವತತ್ವದ ಅರಿವು ಮೂಡಿಸುವ ಅಗತ್ಯವಿದೆ. ಹಳ್ಳಿ–ಹಳ್ಳಿಗಳಲ್ಲಿ ವಚನ ಚಿಂತನೆ ಹಾಗೂ ಶರಣತತ್ವದ ಪ್ರಸಾರ ನಡೆಯಬೇಕು ಎಂದು ಹೇಳಿದರು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಡಾ. ಉಮೇಶ ಪುರದ ಮಾತನಾಡಿ, ಶರಣ ಪರಂಪರೆಯ ತತ್ವಗಳನ್ನು ಪಾಲಿಸುವುದರ ಜತೆಗೆ ಅವುಗಳ ಪ್ರಚಾರಕ್ಕೂ ಮುಂದಾಗುವುದಾಗಿ ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಶರಣ ವ್ಹಿ.ಕೆ. ಕರೇಗೌಡ್ರು, ಒಂದು ತಿಂಗಳ ಕಾಲ ಮನೆ–ಮನೆಗಳಲ್ಲಿ ವಚನ ಚಿಂತನೆ ನಡೆಸಲು ಸಹಕರಿಸಿದ ಶರಣ ದಂಪತಿಗಳು, ಚಿಂತಕರು ಹಾಗೂ ಸಂಘಟಕರನ್ನು ಸ್ಮರಿಸಿದರು.

ರೇಣುಕಾ ಕರೇಗೌಡ್ರು, ಗಂಗಮ್ಮ ಹೂಗಾರ ಹಾಗೂ ಸಂಗಡಿಗರು ವಚನ ಪ್ರಾರ್ಥನೆ ನೆರವೇರಿಸಿದರು. ಎಸ್.ಎ. ಮುಗದ ಸ್ವಾಗತಿಸಿದರು. ಮಕ್ಕಳಾದ ಸಂಜನಾ ಗಾಜಿ, ಪ್ರಥಮ ಹೂಗಾರ ಹಾಗೂ ಕುಮಾರ ಕೆಂಭಾವಿ ವಚನ ವಾಚಿಸಿದರು. ಪ್ರಕಾಶ ಅಸುಂಡಿ ನಿರೂಪಿಸಿದರು. ಗೌರಕ್ಕ ಬಡಿಗಣ್ಣವರ ಶರಣು ಸಮರ್ಪಿಸಿದರು. ಮಂಜುಳಾ ಹಾಸಿಲಕರ ಹಾಗೂ ಸಂಗಡಿಗರ ವಚನ ಮಂಗಲದೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು.

### ನರಗುಂದ, ಬೈರನಹಟ್ಟಿಯಲ್ಲಿ ಪೋಷಣ್ ಮಾಸಾಚರಣೆ

# ಪೌಷ್ಟಿಕ ಆಹಾರವೇ ಆರೋಗ್ಯದ ಅಡಿಪಾಯ

ವಿಜಯಸಾಕ್ಷಿ ಸುದ್ದಿ, ನರಗುಂದ




ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ನರಗುಂದದ ಸೋಮಾಪುರ ಓಣಿಯ ಶಿವಾನಂದ ಮಠ ಹಾಗೂ ಬೈರನಹಟ್ಟಿ–102ನೇ ಅಂಗನವಾಡಿ ಕೇಂದ್ರದಲ್ಲಿ ಪೋಷಣ್ ಮಾಸಾಚರಣೆ ಮತ್ತು 'ಬೇಟಿ ಬಚಾವೋ, ಬೇಟಿ ಪಡಾವೋ' ಕಾರ್ಯಕ್ರಮ ನಡೆಯಿತು.

ನರಗುಂದದ ಕಾರ್ಯಕ್ರಮದಲ್ಲಿ ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಆಯುಷ್ ಇಲಾಖೆಯಿಂದ ವಿವಿಧ ಔಷಧಿಗಳನ್ನು ವಿತರಿಸಲಾಯಿತು. ಬೈರನಹಟ್ಟಿಯಲ್ಲಿ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ಹಾಗೂ ಹೆಣ್ಣು ಮಗುವಿನ ಹುಟ್ಟುಹಬ್ಬವನ್ನು ಆಚರಿಸಲಾಯಿತು. ಮೇಲ್ವಿಚಾರಕಿ ಶಕುಂತಲಾ ಗಣಿ ಮಾತನಾಡಿ, ಪೌಷ್ಟಿಕ ಆಹಾರದ ಮಹತ್ವ ಹಾಗೂ ಅದರ ಸದ್ಬಳಕೆಯ ಕುರಿತು ಮಾಹಿತಿ ನೀಡಿದರು. ಗರ್ಭಿಣಿಯರು ಮತ್ತು ಬಾಣಂತಿಯರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಪೌಷ್ಟಿಕ ಕರ್ನಾಟಕ ನಿರ್ಮಾಣಕ್ಕೆ ಕೈಜೋಡಿಸಬೇಕು. ಲಿಂಗಾನುಪಾತದಲ್ಲಿ ವ್ಯತ್ಯಾಸವಾಗದಂತೆ ಹೆಣ್ಣುಮಕ್ಕಳ ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಮೇಲ್ವಿಚಾರಕಿ ಭಾರತಿ ಕಾಲಚೆಟ್ಟಿ ಮಾತನಾಡಿ, ತಾಯಿ ಮತ್ತು ಮಕ್ಕಳ ಆರೋಗ್ಯ, ಬಾಲ್ಯದ ಆರೈಕೆ ಹಾಗೂ ಪೌಷ್ಟಿಕಾಂಶದ ಅಗತ್ಯಗಳನ್ನು ಪೂರೈಸುವಲ್ಲಿ ಅಂಗನವಾಡಿ ಕಾರ್ಯಕ್ರಮಗಳು ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ಹೇಳಿದರು.

ಮಂಜು ಮೆಣಸಗಿ ಮಾತನಾಡಿ, ಪ್ರಸ್ತುತ ಗರ್ಭಾವಸ್ಥೆಯಲ್ಲಿ ರಕ್ತಹೀನತೆಯಿಂದ ಬಳಲುತ್ತಿರುವುದು ಕಂಡುಬರುತ್ತಿದ್ದು, ಕಾಲಕಾಲಕ್ಕೆ ಪೌಷ್ಟಿಕ ಆಹಾರ ಸೇವಿಸುವ ಮೂಲಕ ಇದನ್ನು ನಿಯಂತ್ರಿಸಬಹುದು. ಅಂಗನವಾಡಿಗಳ ಬಲವರ್ಧನೆಗೆ ಸದಾ ಸಹಕಾರ ನೀಡಲು ಸಿದ್ಧರಿದ್ದೇವೆ ಎಂದರು.

> ನಮ್ಮ ಆಹಾರದಲ್ಲಿಯೇ ಆರೋಗ್ಯವಿದೆ. ಗರ್ಭಾವಸ್ಥೆಯಲ್ಲಿ ರಕ್ತಹೀನತೆ ತಡೆಗಟ್ಟಲು ನಿಯಮಿತವಾಗಿ ಪೌಷ್ಟಿಕ ಆಹಾರ ಸೇವಿಸುವುದು ಅತ್ಯಂತ ಮುಖ್ಯ.
> – ಮಂಜು ಮೆಣಸಗಿ

ಆಯುಷ್ ವೈದ್ಯಾಧಿಕಾರಿ ಡಾ. ಅನಿತಾ ಉತ್ತೂರ ಮಾತನಾಡಿ, ಸಾವ ಯವ ಪದಾರ್ಥಗಳ ಸೇವನೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಮೆಂತ್ಯೆ ಕಾಳು, ಹಾಗಲಕಾಯಿಯಂತಹ ಆಹಾರ ಪದಾರ್ಥಗಳನ್ನು ಸೇವಿಸುವುದರಿಂದ ಹಲವು ಆರೋಗ್ಯ ಸಮಸ್ಯೆಗಳನ್ನು ನಿಯಂತ್ರಿಸಲು ಸಹಕಾ–ರಿಯಾಗುತ್ತದೆ ಎಂದರು.

ಪ್ರೌಢಶಾಲೆ ಮುಖ್ಯೋಪಾಧ್ಯಾಯ ಎಂ.ಡಿ. ಸಕ್ರಿ ಮಾತನಾಡಿ, ಮಧುಮೇಹ ಇರುವವರು ಧಾನ್ಯಗಳ ಪ್ರಮಾಣವನ್ನು ನಿಯಂತ್ರಿಸಿ ತರಕಾರಿ, ಬೇಳೆ ಹಾಗೂ ಮೊಸರಿನ ಸೇವನೆ ಹೆಚ್ಚಿಸಬೇಕು. ಪಾಲಿಶ್ ಮಾಡಿದ ಅಕ್ಕಿಯ ಬದಲು ರಾಗಿ, ಜೋಳ ಅಥವಾ ನವಣೆಯನ್ನು ಬಳಸುವುದು ಉತ್ತಮ. ಸಿಹಿ ಚಹಾ ಹಾಗೂ ಕರಿದ ತಿಂಡಿಗಳನ್ನು ಕಡಿಮೆ ಮಾಡಿ ಒಣಹಣ್ಣು, ಮೊಳಕೆ ಕಾಳು ಮತ್ತು ಮಜ್ಜಿಗೆಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮಗಳಲ್ಲಿ ಪುರಸಭೆ ಮಾಜಿ ಸದಸ್ಯ ಚಂದ್ರಗೌಡ್ರ ಪಾಟೀಲ, ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯ ಟಿ.ಬಿ. ಹಿರೇಮನಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಿ.ಎಸ್. ಮೆಣಸಗಿ, ಕಿರಿಯ ಮಹಿಳಾ ಆರೋಗ್ಯ ಸಹಾಯಕಿ ಸುಮಿತ್ರಾ ಜಗಲಿ, ಪೋಷಣ್ ಅಭಿಯಾನ ಕಾರ್ಯಕ್ರಮ ಸಂಂ–ಯೋಜಕ ಮಂಜುನಾಥ ಗುಗ್ಗರಿ, ಆರೋಗ್ಯ ಇಲಾಖೆಯ ಗಾಯತ್ರಿ ಕೊಳ್ಳಿ, ಪಾಂಡುರಂಗ ಗುಡದೂರ, ಅಂಗನವಾಡಿ ಕಾರ್ಯಕರ್ತೆಯರಾದ ಎಸ್.ಎಸ್. ಮ–ರಿಗೌಡ್ರ, ವಿ.ಎಂ. ಹಿರೇಮನಿ, ಎಚ್.ಬಿ. ಜೋಗಣ್ಣವರ, ಎಂ.ಎಚ್. ಅಸುಂಡಿ, ಶರಣವ್ವ ರಾಯನಗೌಡ್ರ, ರೇಣುಕಾ ಹುಜರತ್ತಿ, ಜಯಶ್ರೀ ದಂಡಿನ ಸೇ–ರಿದಂತೆ ಸಹಾಯಕಿಯರು, ತಾಯಂದಿರು, ಕಿಶೋರಿಯರು ಹಾಗೂ ಮಕ್ಕಳು ಪಾಲ್ಗೊಂಡಿದ್ದರು.

# ಇಡಿ ದಾಳಿಗೆ ಶೇಖಪ್ಪ ಜುಟ್ಲ ಖಂಡನೆ

ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರಾಜ್ಯದ ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳಿ ಅವರ ನಿವಾಸದ ಮೇಲೆ ಜಾರಿ ನಿರ್ದೇಶನಾಲಯ (ಇಡಿ) ದಾಳಿ ನಡೆಸಿರುವುದನ್ನು ನರೇಗಲ್ಲ ಬ್ಲಾಕ್ ಕಾಂಗ್ರೆಸ್ ಎಸ್‌ಟಿ ಘಟಕದ ಅಧ್ಯಕ್ಷ ಶೇಖಪ್ಪ ಜುಟ್ಲ ಖಂಡಿಸಿದ್ದಾರೆ. ಈ ಹಿಂದೆ ಮಾಜಿ ಸಚಿವ ನಾಗೇಂದ್ರ ಅವರ ನಿವಾಸದ ಮೇಲೆ ಇಡಿ ದಾಳಿ ನಡೆದಿದ್ದು, ಬಳಿಕ ಅವರು ರಾಜೀನಾಮೆ ನೀಡಿದ್ದರು. ಇದೀಗ ಸಚಿವ ಸತೀಶ ಜಾರಕಿಹೊಳಿ ಅವರ ನಿವಾಸದ ಮೇಲೂ ದಾಳಿ ನಡೆದಿರುವುದು ರಾಜಕೀಯ ಪ್ರೇರಿತ ಕ್ರಮವೆಂಬ ಅನುಮಾನ ಮೂಡಿಸಿದೆ ಎಂದು ಅವರು ಪ್ರಕಟಣೆಯಲ್ಲಿ ಆರೋಪಿಸಿದ್ದಾರೆ. ಕೇಂದ್ರ ಸರ್ಕಾರ ತನಿಖಾ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಂಡು ರಾಜಕೀಯ ನಡೆಸುತ್ತಿದೆ ಎಂದು ಶೇಖಪ್ಪ ಜುಟ್ಲ ಆರೋಪಿಸಿದ್ದಾರೆ.

## ಸಣ್ಣ ಸುದ್ದಿಗಳು

### ನಿಧನ
### ಅಂಬಾಡಿ ಸುಶೀಲಮ್ಮ



ಹಗರಿಬೊಮ್ಮನಹಳ್ಳಿ: ಪಟ್ಟಣದ ರೈತರ ಓಣಿಯ ದಿವಂಗತ ಅಂಬಾಡಿ ಲಕ್ಷ್ಮಪ್ಪ ಅವರ ಧರ್ಮಪತ್ನಿ ಅಂಬಾಡಿ ಸುಶೀಲಮ್ಮ (60) ಅವರು ನಿಧನರಾದರು.

ಮೃತರು ಇಬ್ಬರು ಪುತ್ರರು, ಓರ್ವ ಪುತ್ರಿ ಹಾಗೂ ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆ ಸೆಪ್ಟೆಂಬರ್ 18ರಂದು ಬೆಳಿಗ್ಗೆ 11 ಗಂಟೆಗೆ ಹಗರಿಬೊಮ್ಮನಹಳ್ಳಿ ರುದ್ರಭೂಮಿಯಲ್ಲಿ ನಡೆಯಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

### ಸುಣಗಾರ ದೊಡ್ಡವೀರಪ್ಪ



ಹಗರಿಬೊಮ್ಮನಹಳ್ಳಿ: ತಾಲೂಕಿನ ಕಡಲಬಾಳು ಗ್ರಾಮದ ಸುಣಗಾರ ದೊಡ್ಡ ವೀರಪ್ಪ (80) ಅವರು ವಯೋಸಹಜ ಅನಾರೋಗ್ಯದಿಂದ ನಿಧನರಾದರು. ಮೃತರು ಮೂವರು ಪುತ್ರರು, ಇಬ್ಬರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆ ಸೆಪ್ಟೆಂಬರ್ 18ರಂದು ಬೆಳಿಗ್ಗೆ 10 ಗಂಟೆಗೆ ಕಡಲಬಾಳು ಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.


### ಶ್ರೀಮತಿ ಜ್ಯೋತಿ ಚೂರಿ



ಗದಗ: ವಿವೇಕಾನಂದ ನಗರದ ನಿವಾಸಿ ಹಾಗೂ ಉಪನ್ಯಾಸಕಿ ಶ್ರೀಮತಿ ಜ್ಯೋತಿ ಸತೀಶ ಚೂರಿ (ಅರಹುಣಸಿ), (47) ಅವರು ಗುರುವಾರ ಮುಂಜಾನೆ ಹೃದಯಾಘಾತದಿಂದ ನಿಧನರಾದರು.ಮೃತರು ಪತಿ, ಓರ್ವ ಪುತ್ರ, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಅವರ ಅಂತ್ಯಕ್ರಿಯೆ ಸೆ. 18ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಗದಗ ತಾಲೂಕಿನ ಕುರ್ತಕೋಟಿ ಗ್ರಾಮದಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

### ಮನೆ-ಮನೆಗೆ ಪರಿಶೀಲನೆ; ಒಂದು ತಿಂಗಳಲ್ಲಿ ಪ್ರಕ್ರಿಯೆ ಪೂರ್ಣಗೊಳಿಸಲು ಡಿಸಿ ಸೂಚನೆ

## ಗೃಹಲಕ್ಷ್ಮಿಗೆ ಬಯೋಮೆಟ್ರಿಕ್ ಕಡ್ಡಾಯ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಗೃಹಲಕ್ಷ್ಮಿ ಯೋಜನೆಯಡಿ ಈಗಾಗಲೇ ಗುರುತಿಸಲ್ಪಟ್ಟಿರುವ ಅರ್ಹ ಫಲಾನುಭವಿಗಳ ವಿವರ ಹಾಗೂ ಪ್ರಸ್ತುತ ಸ್ಥಿತಿಯನ್ನು ಖಚಿತಪಡಿಸಿಕೊಳ್ಳಲು ಬಯೋಮೆಟ್ರಿಕ್ ಆಧಾರಿತ ಮರುಪ-ರಿಶೀಲನೆ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸೆ.17ರಂದು ನಡೆದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ಮರುಪ-ರಿಶೀಲನೆಗಾಗಿ ನಿಯೋಜಿತ ಗಣತಿದಾರರು ಹಾಗೂ ಗ್ಯಾರಂಟಿ ಸಮಿತಿ ಸದಸ್ಯರು ಫಲಾನುಭವಿಗಳ ಮನೆಗಳಿಗೆ ಕಡ್ಡಾಯವಾಗಿ ಭೇಟಿ ನೀಡಲಿದ್ದಾರೆ. ಈ ವೇಳೆ ಮೊಬೈಲ್ ಅಪ್ಲಿಕೇಶನ್, ಜಿಪಿಎಸ್ ಗುರುತಿನೊಂದಿಗೆ ಛಾಯಾಚಿತ್ರ ದಾಖಲೆ ಹಾಗೂ ಆಧಾರ್ ಆಧಾರಿತ ಮುಖದ ದೃಢೀಕರಣ ಸೇರಿದಂತೆ ತಾಂತ್ರಿಕ ವ್ಯವಸ್ಥೆ ಬಳಸಲಾಗುತ್ತದೆ.

ಮರುಪರಿಶೀಲನೆ ಕಾರ್ಯ ಆರಂಭವಾದ ದಿನಾಂಕದಿಂದ ಒಂದು ತಿಂಗಳೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಬೆಂಗಳೂರು ಒನ್, ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಇತರೆ ನಿಗದಿತ ಸೇವಾ ಕೇಂದ್ರಗಳನ್ನು ಸಹಾಯಕ ಅಥವಾ ಪರ್ಯಾಯ ವ್ಯವಸ್ಥೆಯಾಗಿ ಮಾತ್ರ ಬಳಸಲಾಗುತ್ತದೆ. ಈ ಪ್ರಕ್ರಿಯೆ ಈಗಾಗಲೇ ಗುರುತಿಸಲ್ಪಟ್ಟಿರುವ ಅಸ್ತಿತ್ವದಲ್ಲಿರುವ ಫಲಾನುಭವಿಗಳಿಗೆ ಮಾತ್ರ ಅನ್ವಯವಾಗಲಿದ್ದು, ಹೊಸ ಫಲಾನುಭವಿಗಳ ನೋಂದಣಿ ಮರುಪರಿಶೀಲನೆಯ ವ್ಯಾಪ್ತಿಗೆ ಬರುವುದಿಲ್ಲ ಎಂದು ಜಿಲ್ಲಾಧಿಕಾರಿ ಸ್ಪಷ್ಟಪಡಿಸಿದ್ದಾರೆ. ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಮಟ್ಟದ ಅಧ್ಯಕ್ಷ ಎಸ್.ಆರ್. ಪಾಟೀಲ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪ್ರಕಾಶ ಹಳಿಯಾಳ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಅಲ್ಲಪ್ಪ ಎಂ. ಬಡಿಗೇರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವೀರಣ್ಣಗೌಡ ಪಾಟೀಲ ಸೇರಿದಂತೆ ವಿವಿಧ ಯೋಜನೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

### ಆತ್ಮವಿಶ್ವಾಸದಿಂದ ಮುನ್ನಡೆದರೆ ಯಶಸ್ಸು ಸಾಧ್ಯ; ಬೊಮ್ಮಾಯಿ

# ದಿವ್ಯಾಂಗರ ಕೊಡುಗೆ ಸಮಾಜಕ್ಕೆ ಅಮೂಲ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ದಿವ್ಯಾಂಗರು ಎದುರಿಸುವ ಸವಾಲುಗಳ ನಡುವೆಯೂ ಅವರಲ್ಲಿರುವ ಪ್ರತಿಭೆ ಮತ್ತು ಸಾಮರ್ಥ್ಯ ಸಮಾಜದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದೆ. ಸಮಾಜದ ಪರಿಪೂರ್ಣತೆಗೆ ದಿವ್ಯಾಂಗರ ಕೊಡುಗೆ ಅತ್ಯಮೂಲ್ಯ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.




ಗದಗ ನಗರದ ಎಪಿಎಂಸಿ ಯಾರ್ಡ್‌ನ ಶ್ರೀ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ 'ಸೇವಾ ಸಂಕಲ್ಪ ಅಭಿಯಾನ'ದಡಿ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಎಡಿಐಪಿ ಯೋಜನೆಯ ಸಾಮಾಜಿಕ ಅಧಿಕಾರಿತ ಶಿಬಿರದಲ್ಲಿ ದಿವ್ಯಾಂಗರಿಗೆ ಸಾಧನ-ಸಲಕರಣೆ ವಿತ-ರಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ದಿವ್ಯಾಂಗರು ಯಾರಿಗೂ ಕಡಿಮೆಯಿಲ್ಲ. ಆತ್ಮಸ್ಥೈರ್ಯ ಮತ್ತು ಆತ್ಮವಿಶ್ವಾಸದಿಂದ ಮುನ್ನಡೆದರೆ ಬದುಕಿನಲ್ಲಿ ಪ್ರಗತಿ ಹಾಗೂ ಯಶಸ್ಸು ಸಾಧಿಸಬಹುದು. ಯಾರ ಮೇಲೂ ಅವಲಂಬಿತರಾಗದೆ ಸ್ವಾಭಿಮಾನದಿಂದ ಬದುಕು ಕಟ್ಟಿಕೊಳ್ಳುವಂತೆ ಅವರು ಕರೆ ನೀಡಿದರು. ಕೇಂದ್ರ ಸರ್ಕಾರದ ವಿವಿಧ ಜನಕಲ್ಯಾಣ ಯೋಜನೆಗಳಿಂದ ದೇಶದ ಜನರಿಗೆ ಮನೆ, ಶೌಚಾಲಯ, ಕುಡಿಯುವ ನೀರು ಹಾಗೂ ಅಡುಗೆ ಅನಿಲ ಸೇರಿದಂತೆ ಹಲವು ಸೌಲಭ್ಯಗಳು ದೊರೆತಿವೆ ಎಂದು ಬೊಮ್ಮಾಯಿ ಹೇಳಿದರು. ಸರ್ಕಾರದ ಯೋಜನೆಗಳ ಪ್ರಯೋಜನ ಅರ್ಹ-ರಿಗೆ ತಲುಪಿಸುವ ಮೂಲಕ ಸ್ವಾವಲಂಬಿ ಬದುಕಿಗೆ ಅವಕಾಶ ಕಲ್ಪಿಸುವುದು ಅಗತ್ಯ ಎಂದರು. ದಿವ್ಯಾಂಗರಿಗೆ ಅಗತ್ಯವಿರುವ ಸಾಧನ-ಸಲಕರಣೆಗಳನ್ನು ಒದಗಿಸುವ ಮೂಲಕ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಮುಂದಿನ ದಿನಗಳಲ್ಲಿ ಜಿಲ್ಲೆಯ ಪ್ರತಿಯೊಬ್ಬ ಅರ್ಹ ದಿವ್ಯಾಂಗರಿಗೂ ಅಗತ್ಯ ನೆರವು ತಲುಪಿಸುವ ನಿಟ್ಟಿನಲ್ಲಿ ಪ್ರಯತ್ನಿಸಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ ಎಸ್.ಎನ್., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಜಿ. ಮಣ್ಣೂರ ಸೇ-ರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

> ದಿವ್ಯಾಂಗರು ಯಾರ ಮೇಲೂ ಅವಲಂಬಿತರಾಗದೆ ಆತ್ಮವಿಶ್ವಾಸ ಮತ್ತು ಸ್ವಾಭಿಮಾನದಿಂದ ಬದುಕು ಕಟ್ಟಿಕೊಳ್ಳಬೇಕು. ಅವರಿಗೆ ಅಗತ್ಯವಿರುವ ನೆರವು ಹಾಗೂ ಸಾಧನ-ಸಲಕರಣೆಗಳನ್ನು ತಲುಪಿಸುವುದು ನಮ್ಮ ಮಾನವೀಯ ಜವಾಬ್ದಾರಿ.
>
> – ಬಸವರಾಜ ಬೊಮ್ಮಾಯಿ, ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ

## ಮೆಲ್ಬೋರ್ನ್ ಚಿತ್ರೋತ್ಸವಕ್ಕೆ 'ಪುಟ್ಟಣ್ಣನ ಕತ್ತೆ'!

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ವಿಶಿಷ್ಟ ಹಾಗೂ ಸೂಕ್ಷ್ಮ ಕಥಾನಕಗಳ ಮೂಲಕ ಗಮನ ಸೆಳೆದಿರುವ ನಿರ್ದೇಶಕ ಸಿದ್ದು ಪೂರ್ಣಚಂದ್ರ ಅವರ 'ಪುಟ್ಟಣ್ಣನ ಕತ್ತೆ' ಕನ್ನಡ ಚಿತ್ರವು ಆಸ್ಟ್ರೇಲಿಯಾದ ಪ್ರತಿಷ್ಠಿತ ಮೆಲ್ಬೋರ್ನ್ ಚಲನಚಿತ್ರೋತ್ಸವಕ್ಕೆ ಆಯ್ಕೆಯಾಗಿದೆ.

ಕನ್ನಡ ಚಿತ್ರರಂಗದ ಮಟ್ಟಿಗೆ ಕತ್ತೆಯೊಂದನ್ನು ಕೇಂದ್ರವಾಗಿ-ಟ್ಟುಕೊಂಡು ರೂಪುಗೊಂಡಿರುವ ವಿಭಿನ್ನ ಕಥಾ ಹಂದರದ ಚಿತ್ರ ಇದಾಗಿದ್ದು, ಮೆಲ್ಬೋರ್ನ್‌ನಲ್ಲಿ ನಡೆಯಲಿರುವ ಚಲನ ಚಿತ್ರೋತ್ಸವದಲ್ಲಿ ಚಿತ್ರ ಪ್ರದರ್ಶನಗೊಳ್ಳಲಿದೆ. ಜಾಗತಿಕ ಮಟ್ಟದ ಹಲವು ಚಿತ್ರಗಳ ನಡುವೆ ಕನ್ನಡದ ಚಿತ್ರವೊಂದು ಆಯ್ಕೆಯಾಗಿರುವುದು ಚಿತ್ರತಂಡಕ್ಕೆ ಸಂತಸದ ಸಂಗತಿಯಾಗಿದ್ದು, ಕನ್ನಡ ಚಿತ್ರರಂಗಕ್ಕೂ ಹೆಮ್ಮೆಯ ವಿಷಯವಾಗಿದೆ.




ಯಾವುದೋ ಹಳ್ಳಿಯಿಂದ ಕತ್ತೆಯೊಂದಿಗೆ ಪಟ್ಟಣಕ್ಕೆ ಬರುವ ವ್ಯಕ್ತಿಯ ಸುತ್ತ ನಡೆಯುವ ಕಥೆ ಚಿತ್ರದಲ್ಲಿದ್ದು, ನಗರಗಳಲ್ಲಿ ಕತ್ತೆ ಹಾಲು ಮಾರುವವರ ಬದುಕಿನ ಸನ್ನಿವೇಶಗಳನ್ನೂ ಕಥೆ ಒಳಗೊಂಡಿದೆ. ಭೀಮೇಶ್ ಗೌಡ ಅವರು 'ಪುಟ್ಟಣ್ಣ'ನ ಪಾತ್ರಕ್ಕೆ ಜೀವ ತುಂಬಿದ್ದರೆ, ಅನೀಶ್ ಆರ್ಯನ್ ನಾಯಕನಾಗಿ ಸಂಕೀರ್ಣ ಪಾತ್ರದಲ್ಲಿ ನಟಿಸಿದ್ದಾರೆ.

ಪೂರ್ಣಚಂದ್ರ ಫಿಲಂಸ್ ಬ್ಯಾನರ್‌ನಲ್ಲಿ ತನ್ಮಯ್ ಎಸ್. ಗೌಡ ನಿರ್ಮಿಸಿರುವ ಚಿತ್ರಕ್ಕೆ ಸಿದ್ದು ಪೂರ್ಣಚಂದ್ರ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡಿದ್ದಾರೆ. ಅನೀಶ್ ಆರ್ಯನ್, ಭೀಮೇಶ್ ಗೌಡ, ಎನ್.ಟಿ. ರಾಮಸ್ವಾಮಿ, ಕವಿತಾ ಕಂಬಾರ್, ವಿಭಾ, ಕಲಾರತಿ ಮಹದೇವ್, ರೋಹಿಣಿ, ರಶ್ಮಿ ಮೈಸೂರು, ಲಕ್ಕಿ ಶಂಕರ್, ವಾಸು, ರಾಕಿ, ಮಂಡ್ಯ ಸಿದ್ದು ಸೇರಿದಂತೆ ಕಲಾವಿದರು ತಾರಾಗಣದಲ್ಲಿದ್ದಾರೆ.

ರಾಜು ಹೆಮ್ಮಿಗೆಪುರ ಛಾಯಾಗ್ರಹಣ, ಅನಂತ್ ಆರ್ಯನ್ ಸಂಗೀತ ನಿರ್ದೇಶನ, ದೀಪು ಸಿ.ಎಸ್. ಸಂಕಲನ ನಿರ್ವಹಿಸಿದ್ದಾರೆ. ಸುಧೀಂದ್ರ ವೆಂಕಟೇಶ್, ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ ಹಂಡಿಗಿ ಪಿಆರ್‌ಒಗಳಾಗಿ ಕಾರ್ಯನಿರ್ವಹಿಸಿದ್ದಾರೆ.

ಈ ಹಿಂದೆ 'ದಾರಿಯಾವುದಯ್ಯ ವೈಕುಂಠಕ್ಕೆ', 'ಬ್ರಹ್ಮಕಮಲ' ಹಾಗೂ 'ಈ ಪಾದ ಪುಣ್ಯ ಪಾದ' ಸೇರಿದಂತೆ ವಿಭಿನ್ನ ಕಥಾ ಚಿತ್ರಗಳನ್ನು ನೀಡಿರುವ ಸಿದ್ದು ಪೂರ್ಣಚಂದ್ರ ಅವರ ಹೊಸ ಪ್ರಯತ್ನ ಮೆಲ್ಬೋರ್ನ್ ಚಲನಚಿತ್ರೋತ್ಸವಕ್ಕೆ ಆಯ್ಕೆಯಾಗಿರುವುದು ಚಿತ್ರತಂಡದ ಸಂಭ್ರಮವನ್ನು ಹೆಚ್ಚಿಸಿದೆ.

## ಮೂವರು ಮಹನೀಯರ ಬದುಕು ದಾರಿದೀಪ

**ವಿಜಯಸಾಕ್ಷಿ ಸುದ್ದಿ, ಗದಗ**

ಸರ್ ಸಿದ್ದಪ್ಪ ಕಂಬಳಿ, ಸರ್ವಪಲ್ಲಿ ರಾಧಾಕೃಷ್ಣನ್ ಹಾಗೂ ಸರ್ ಎಂ. ವಿಶ್ವೇಶ್ವರಯ್ಯ ಅವರ ಮೌಲ್ಯಯುತ ಬದುಕು ಎಲ್ಲರಿಗೂ ಆದರ್ಶವಾಗಿದ್ದು, ಅವರ ಜೀವನ ಮೌಲ್ಯಗಳು ವಿದ್ಯಾರ್ಥಿಗಳಿಗೆ ದಾರಿದೀಪವಾಗಿವೆ ಎಂದು ಮುಳಗುಂದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ರಮೇಶ ಕಲ್ಲನಗೌಡರ ಹೇಳಿದರು.

ಗದಗದ ಸರ್ ಸಿದ್ದಪ್ಪ ಸ್ಮಾರಕ ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಆಯೋಜಿಸಿದ್ದ ಮೂವರು ಮಹನೀಯರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾಜಿಕ ಬದುಕಿಗೆ ತಮ್ಮ ಜೀವನವನ್ನು ಮುಡಿಪಾಗಿಟ್ಟು ಸಾರ್ಥಕತೆ ಕಂಡುಕೊಂಡ ಈ ಸಾಧಕರ ಜೀವನವನ್ನು ಸ್ಮರಿಸಿ ದಿನಾಚರಣೆ ಆಚರಿಸುತ್ತಿರುವುದು ಅರ್ಥಪೂರ್ಣವಾಗಿದೆ ಎಂದರು.

ಸಂಸ್ಥೆಯ ಸ್ಥಾನಿಕ ಸಮಿತಿ ಸದಸ್ಯ ವೈ.ಎನ್. ಗೌಡರ ಮಾತನಾಡಿ, ವಿದ್ಯಾರ್ಥಿಗಳು ಮೂವರು ಸಾಧಕರ ಜೀವನ ಚರಿತ್ರೆ ಓದಿ, ಅವರ ಸಾಧನೆಯ ಹಾದಿಯನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಪ್ರತಿಯೊಂದು ವೃತ್ತಿಯಲ್ಲೂ ಕೌಶಲ್ಯ ಬೆಳೆಸಿಕೊಳ್ಳುವುದು ಅಗತ್ಯ ಎಂದರು.

> ಮಹನೀಯರ ಬದುಕನ್ನು ಕೇವಲ ನೆನಪಿಸಿಕೊಳ್ಳುವುದಕ್ಕಿಂತ, ಅವರ ಮೌಲ್ಯಗಳು ಮತ್ತು ಸಾಧನೆಯ ಹಾದಿಯನ್ನು ವಿದ್ಯಾರ್ಥಿಗಳು ತಮ್ಮ ಬದುಕಿನಲ್ಲಿ ಅಳವಡಿಸಿ ಕೊಂಡಾಗ ಇಂತಹ ದಿನಾಚರಣೆಗಳು ಸಾರ್ಥಕವಾಗುತ್ತವೆ.
>
> – ಡಾ. ರಮೇಶ ಕಲ್ಲನಗೌಡರ, ಪ್ರಾಚಾರ್ಯ

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಎಸ್.ಎಚ್. ಪಾಟೀಲ ಮಾತನಾಡಿ, ಮಹನೀಯರ ಜಯಂತಿ ಹಾಗೂ ದಿನಾಚರಣೆಗಳ ಉದ್ದೇಶ ಅವರ ಜೀವನ ಮೌಲ್ಯಗಳನ್ನು ಸ್ಮರಿಸಿ, ಅವುಗಳಿಂದ ಸ್ಫೂರ್ತಿ ಪಡೆಯುವುದಾಗಿದೆ ಎಂದರು. ಕಿರಿಯ ತರಬೇತಿ ಅಧಿಕಾರಿ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜೀವನ ಚ-ರಿತ್ರೆ ಕುರಿತು ಉಪನ್ಯಾಸ ನೀಡಿದರು. ತರಬೇತಿ ಅಧಿಕಾರಿ ವೀರೇಶ ನಾರಾಯಣಪೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀನಿವಾಸ ಮದ್ನೂರ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಕೆ.ಆರ್. ಕೋರಿ ಸ್ವಾಗತಿಸಿದರು. ಕಿರಿಯ ತರಬೇತಿ ಅಧಿಕಾರಿ ಸಿ.ಎಸ್. ಬುಳ್ಳಾ ವಂದಿಸಿದರು.

### ಗದಗದಲ್ಲಿ ವಿಜೃಂಭಣೆಯಿಂದ ವಿಶ್ವೇಶ್ವರಯ್ಯ ಜಯಂತಿ ಆಚರಣೆ

## ಎಂಜಿನಿಯರ್‌ಗಳ ಸೇವೆಗೆ ಸ್ಮರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತದ ಶ್ರೇಷ್ಠ ಎಂಜಿನಿಯರ್ ಹಾಗೂ ಭಾರತರತ್ನ ಸರ್. ಎಂ. ವಿಶ್ವೇಶ್ವರಯ್ಯ ಅವರ ಜನ್ಮದಿನಾಚರಣೆಯನ್ನು ಗದಗ-ಬೆಟಗೇರಿ ಸರ್. ಎಂ. ವಿಶ್ವೇಶ್ವರಯ್ಯ ಸಿವಿಲ್ ಕನ್ಸಲ್ಟಂಟ್ಸ್ ಆ್ಯಂಡ್ ಎಂಜಿನಿಯರ್ಸ್ ಫೋರಂ ವತಿಯಿಂದ ಸೆ.15ರಂದು ನಗರದ ಶ್ರೀ ಕರಿಯಮ್ಮಕಲ್ಲು ಬಡಾವಣೆಯ ಸದ್ಗುರು ಶ್ರೀ ಮುಕ್ಕಣ್ಣೇಶ್ವರ ಸಮುದಾಯ ಭವನದಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು.



ಕಾರ್ಯಕ್ರಮದ ಸಾನಿಧ್ಯವನ್ನು ಶ್ರೀ ಮುಕ್ಕಣ್ಣೇಶ್ವರ ಮಠದ ಪೀಠಾಧಿಪತಿ ಶ್ರೀ ಶಂಕರಾನಂದ ಮಹಾಸ್ವಾಮಿಗಳು ವಹಿಸಿದ್ದರು. ಇಂಜಿನಿಯರ್ ಬೂದೇಶ ಎಂ. ಬ್ಯಾಹಟ್ಟಿ ಅಧ್ಯಕ್ಷತೆ ವಹಿಸಿದ್ದರು. ಪ್ರೊ. ವೀರೇಶ ಮಾಗಳದ ಮುಖ್ಯ ಅತಿಥಿಗಳಾಗಿ, ಇಂಜಿನಿಯರ್ ಪ್ರಕಾಶ ಪೂಜಾರ ಹಾಗೂ ಶಂಕರ ಹಿರೇಮಠ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಸಾನಿಧ್ಯ ವಹಿಸಿದ್ದ ಶ್ರೀ ಶಂಕರಾನಂದ ಮಹಾಸ್ವಾಮಿಗಳು ಫೋರಂ ಗದಗ ಪರಿಸರದಲ್ಲಿ ವಿಭಿನ್ನ ಕಾರ್ಯಕ್ರಮಗಳ ಮೂಲಕ ಜನಮಾನಸದಲ್ಲಿ ಗುರುತಿಸಿಕೊಂಡಿರುವುದು ಶ್ಲಾಘನೀಯ. ಸಂಸ್ಥೆ ಇನ್ನಷ್ಟು ಅಭಿವೃದ್ಧಿ ಹೊಂದಲಿ ಎಂದು ಆಶೀರ್ವದಿಸಿದರು.

> ವಿಶ್ವೇಶ್ವರಯ್ಯನವರಂತಹ ಮಹನೀಯರ ಜೀವನ ಮತ್ತು ಸಾಧನೆಗಳು ಪ್ರತಿಯೊಬ್ಬ ಎಂಜಿನಿಯರ್‌ಗೂ ವೃತ್ತಿಪರ ಬದ್ಧತೆ ಹಾಗೂ ಸಮಾಜಮುಖಿ ಸೇವೆಗೆ ಸದಾ ಪ್ರೇರಣೆಯಾಗಲಿ.
>
> – ಬೂದೇಶ ಎಂ. ಬ್ಯಾಹಟ್ಟಿ

ಕಾರ್ಯಕ್ರಮದಲ್ಲಿ ಅಗಲಿದ ಫೋರಂನ ಮಾಜಿ ಕಾರ್ಯದರ್ಶಿ ನೀಲಕಂಠ ಗದಗಿನ ಅವರ ಆತ್ಮಕ್ಕೆ ಶಾಂತಿ ಕೋರಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಅಲ್ಲದೆ, ಫೋರಂ ವತಿಯಿಂದ ಅವರ ಮಕ್ಕಳಿಗೆ ಆರ್ಥಿಕ ನೆರವು ನೀಡಲಾಯಿತು.

ದಿವ್ಯ ಅಬ್ಬಿಗೇರಿಮಠ ನಿರೂಪಿಸಿದರು. ಇಂಜಿನಿಯರ್ ಗೋಪಾಲ ನಾಯಕ ಸ್ವಾಗತಿಸಿದರು. ಇಂಜಿನಿಯರ್ ಶಿವಕುಮಾರ ಪಟ್ಟಣಶೆಟ್ಟಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಇಂಜಿನಿಯರ್ ಸೋನಲ ವರ್ಣೇಕರ ವಂದನಾರ್ಪಣೆ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಕಟ್ಟಡ ನಿರ್ಮಾಣ ಮಾಲೀಕರು, ಗಣ್ಯ ವ್ಯಾಪಾರಸ್ಥರು, ಕಟ್ಟಡ ನಿರ್ಮಾಣ ಕಾರ್ಮಿಕರು, ಸಿಮೆಂಟ್, ಸ್ಟೀಲ್ ಸೇರಿದಂತೆ ವಿವಿಧ ಕಂಪನಿಗಳ ಮಾಲೀಕರು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

## ಕರಕುಶಲತೆಯ ದೇವರಿಗೆ ನಮನ



**ವಿಜಯಸಾಕ್ಷಿ ಸುದ್ದಿ, ಅಲಗಿಲವಾಡ**

ಶಿರಹಟ್ಟಿ ತಾಲೂಕಿನ ಅಲಗಿಲವಾಡ ಗ್ರಾಮದ ಶಾಲೆಯಲ್ಲಿ ಭಗವಾನ್ ವಿಶ್ವಕರ್ಮರ ಜಯಂತ್ಯುತ್ಸ ವವನ್ನು ಗುರುವಾರ ಆಚ-ರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಿಕ್ಷಕರು, ವಿಶ್ವಕರ್ಮರು ಕರಕುಶಲತೆಯ ಜ್ಞಾನದ ಕಣಜ ಹಾಗೂ ದೈವಿಕ ವಾಸ್ತುಶಿಲ್ಪಿ ಎಂದು ಪುರಾಣಗಳಲ್ಲಿ ಉಲ್ಲೇಖಿಸಲಾಗಿದೆ. ಸೃಜನಶೀಲತೆ, ಕೌಶಲ್ಯ ಮತ್ತು ನಿರ್ಮಾಣದ ಜ್ಞಾನಕ್ಕೆ ವಿಶ್ವಕರ್ಮರ ಕೊಡುಗೆ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಪುರಾಣಗಳ ಪ್ರಕಾರ ವಿಶ್ವಕರ್ಮರನ್ನು ಬ್ರಹ್ಮಾಂಡದ ಆದಿ ವಾಸ್ತುಶಿಲ್ಪಿ ಹಾಗೂ ದೈವಿಕ ಇಂಜಿನಿಯರ್ ಎಂದು ಕರೆಯಲಾಗುತ್ತದೆ. ರಾಮಾಯಣದ ಪುಷ್ಪಕ ವಿಮಾನ, ಶಿವನ ತ್ರಿಶೂಲ, ವಿಷ್ಣುವಿನ ಸುದರ್ಶನ ಚಕ್ರ ಹಾಗೂ ಇಂದ್ರನ ವಜ್ರಾಯುಧಗಳನ್ನು ವಿಶ್ವಕರ್ಮರು ನಿರ್ಮಿಸಿದ್ದಾರೆ ಎಂಬ ನಂಬಿಕೆಯಿದೆ. ಅವರ ಕರಕುಶಲ ಜ್ಞಾನ ಮತ್ತು ಪರಂಪರೆಯನ್ನು ಮಕ್ಕಳಿಗೆ ಪರಿಚಯಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಪ್ರಧಾನ ಗುರುಗಳಾದ ಹಾಲೇಶ ಎಸ್. ಜಕ್ಕಲಿ, ಶಿಕ್ಷಕ ನೇಮೇಶ ಯರಗುಪ್ಪಿ, ಗ್ರಾಮದ ಹಿರಿಯರಾದ ಇಮಾಮಸಾಬ ನದಾಫ, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ವೀರಭದ್ರ ದೇವರು ಪ್ರಾಚೀನ ಕಾಲದ ದೇವರು



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಶ್ರೀ ವೀರಭದ್ರ ದೇವರು ಅತ್ಯಂತ ಪ್ರಾಚೀನ ಕಾಲದ ಚರಿತ್ರೆ ಹೊಂದಿದ್ದು, ರಂಭಾಪುರಿ ಪೀಠದ ಮೂಲ ಗೋತ್ರ ಪುರುಷನಾಗಿದ್ದಾನೆ ಎಂದು ಷ.ಬ್ರ. ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಪಟ್ಟಣದ ಹಿರೇಮಠದಲ್ಲಿ ಶ್ರೀಗಳ ಸಾನಿಧ್ಯದಲ್ಲಿ ಶ್ರೀ ವೀರಭದ್ರ ದೇವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ವೀರಭದ್ರ ದೇವರ ಜಯಂತ್ಯೋತ್ಸವ ಆಚ-ರಿಸಲಾಯಿತು.

ಆಶೀರ್ವಚನ ನೀಡಿದ ಶ್ರೀಗಳು, ಬಹುತೇಕ ವೀರಶೈವ-ಲಿಂಗಾಯತ ಭಕ್ತರ ಮನೆದೇವರು ವೀರಭದ್ರೇಶ್ವರನಾಗಿದ್ದಾನೆ. ಭಕ್ತರು ದೇವರನ್ನು ಭಕ್ತಿಯಿಂದ ಆರಾಧಿಸುವುದರ ಜತೆಗೆ ದೇವರ ಚರಿತ್ರೆ ಹಾಗೂ ಪರಂಪರೆಯ ಬಗ್ಗೆಯೂ ತಿಳಿದುಕೊಳ್ಳಬೇಕು. ಈ ನಾಡಿನ ಬಹುತೇಕ ಊರುಗಳಲ್ಲಿ ವೀರಭದ್ರ ದೇವಾಲಯಗಳಿರುವುದು ಭಕ್ತಿಯ ಪರಂಪರೆಗೆ ಸಾಕ್ಷಿಯಾಗಿದೆ ಎಂದರು.

ದೇವರ ಮೇಲಿನ ಭಕ್ತಿ ಹಾಗೂ ದೈವಬಲದಿಂದ ಜೀವನದಲ್ಲಿ ಅನೇಕ ಸಾಧನೆಗಳನ್ನು ಮಾಡಬಹುದು. ಜಗತ್ತಿನಲ್ಲಿ ಎಲ್ಲರೂ ಮೋಕ್ಷವನ್ನು ಬಯಸುತ್ತಾರೆ. ಆದರೆ ಅದನ್ನು ಸಾಧಿಸಲು ಅಗತ್ಯವಾದ ಸಿದ್ಧತೆ ಮಾಡಿಕೊಳ್ಳುವ ಪ್ರಯತ್ನ ಕಡಿಮೆ. ಮೋಕ್ಷದ ಸಂಕೇತವಾಗಿ ಶ್ರೀ ವೀರಭದ್ರ ದೇವರನ್ನು ಕಾಣಬಹುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನರೇಗಲ್ಲ ಶ್ರೀ ಜಗದ್ಗುರು ಪಂಚಾಚಾರ್ಯ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಈಶ್ವರ ಬೆಟಗೇರಿ, ಡಾ. ಆರ್.ಕೆ. ಗಚ್ಚಿನಮಠ, ಮಂಜುನಾಥ ಹಿರೇಮಠ, ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಎನ್.ಎಸ್. ಹಿರೇಮಠ, ಎ.ಎಂ. ಬೆಟಗೇರಿ, ಈಶ್ವರ ಆದಿ, ಪ್ರಶಾಂತ ಹಿರೇಮಠ ಸೇ-ರಿದಂತೆ ಶಿಕ್ಷಕಿಯರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

### ತಾಯಿ-ಮಗುವಿನ ಆರೋಗ್ಯಕ್ಕೆ ಪೋಷಕಾಂಶಯುಕ್ತ ಆಹಾರ ಅಗತ್ಯ

## ಪೌಷ್ಟಿಕ ಆಹಾರವೇ ಆರೋಗ್ಯದ ಅಡಿಪಾಯ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮತೋಲನ ಹಾಗೂ ಗುಣಮಟ್ಟದ ಪೌಷ್ಟಿಕ ಆಹಾರ ಸೇವಿಸುವ ಮೂಲಕ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ರೋಣ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಲಲಿತಾ ಅಳವಂಡಿ ಹೇಳಿದರು.

ಸಮೀಪದ ಜಕ್ಕಲಿ ಗ್ರಾಮದ ಅಂಗನವಾಡಿ ಕೇಂದ್ರ ಸಂಖ್ಯೆ 283ರಲ್ಲಿ ಬುಧವಾರ ಆಯೋಜಿಸಿದ್ದ ರಾಷ್ಟ್ರೀಯ ಪೋಷಣ್ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಗುವಿನ ಜೀವನದ ಮೊದಲ ಸಾವಿರ ದಿನಗಳು ಅತ್ಯಂತ ಮಹತ್ವದ್ದಾಗಿವೆ. ಈ ಅವಧಿಯಲ್ಲಿ ತಾಯಿ ಮತ್ತು ಮಗುವಿಗೆ ಅಗತ್ಯ ಪೌಷ್ಟಿಕಾಂಶ ದೊರೆಯುವಂತೆ ಕುಟುಂಬದವರು ವಿಶೇಷ ಕಾಳಜಿ ವಹಿಸಬೇಕು. ಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಸಮತೋಲನ ಆಹಾರ ಅಗತ್ಯವಾಗಿದ್ದು, ದೈನಂದಿನ ಆಹಾರದಲ್ಲಿ ಪೌಷ್ಟಿಕ ಪದಾರ್ಥಗಳಿಗೆ ಆದ್ಯತೆ ನೀಡಬೇಕು ಎಂದರು.



ಪ್ರಾಥಮಿಕ ಸುರಕ್ಷಣಾಧಿಕಾರಿ ಸಾವಿತ್ರಿ ಹಿರೇವಡೆಯರ್ ಮಾತನಾಡಿ, ಗರ್ಭಿಣಿಯರು, ಬಾಣಂತಿಯರು ಹಾಗೂ ಬೆಳೆಯುತ್ತಿರುವ ಮಕ್ಕಳು ಪೌಷ್ಟಿಕ ಆಹಾರ ಸೇವಿಸುವುದು ಅತ್ಯವಶ್ಯಕ. ರಕ್ತಹೀನತೆಯನ್ನು ನಿರ್ಲಕ್ಷಿಸದೆ ಹಸಿರು ಸೊಪ್ಪು, ತರಕಾರಿ ಸೇರಿದಂತೆ ಪೌಷ್ಟಿಕ ಆಹಾರವನ್ನು ನಿಯಮಿತವಾಗಿ ಸೇವಿಸುವಂತೆ ಸಲಹೆ ನೀಡಿದರು.

ಸಮುದಾಯ ಆರೋಗ್ಯ ಅಧಿಕಾರಿ ಸಂತೋಷ್ ರಾಠೋಡ ಪೋಷಣ್ ಅಭಿಯಾನದ ಮಹತ್ವ ಹಾಗೂ ಆರೋಗ್ಯಕರ ಆಹಾರ ಪದ್ಧತಿಯ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ನೆರವೇರಿಸಿ, ತಾಯಿ-ಮಗುವಿನ ಆರೋಗ್ಯ ಹಾಗೂ ಸುಖಕರ ಹೆರಿಗೆಗಾಗಿ ಶುಭ ಹಾರೈಸಲಾಯಿತು. ಆರು ತಿಂಗಳು ತುಂಬಿದ ಮಗುವಿಗೆ ಅನ್ನಪ್ರಾಶನ ನೆರವೇರಿಸಿ, ಪೂರಕ ಆಹಾರ ಸೇವನೆಗೆ ಸಾಂಕೇತಿಕ ಚಾಲನೆ ನೀಡಲಾಯಿತು. ಆರು ತಿಂಗಳ ಬಳಿಕ ತಾಯಿಯ ಹಾಲಿನೊಂದಿಗೆ ವಯೋಮಾನಕ್ಕೆ ಅನುಗುಣವಾದ ಪೂರಕ ಆಹಾರ ನೀಡುವ ಕುರಿತು ಕುಟುಂಬದವ-ರಿಗೆ ಮಾಹಿತಿ ನೀಡಲಾಯಿತು.

> ತಾಯಿ ಮತ್ತು ಮಗುವಿನ ಆರೋಗ್ಯವು ಕುಟುಂಬದ ಆರೋಗ್ಯದ ಭದ್ರ ಬುನಾದಿ. ಗರ್ಭಾವಸ್ಥೆಯಿಂದಲೇ ಪೌಷ್ಟಿಕ ಆಹಾರ ಹಾಗೂ ಆರೋಗ್ಯದ ಬಗ್ಗೆ ಕಾಳಜಿ ವಹಿಸಿದರೆ ಮಗುವಿನ ಉತ್ತಮ ಬೆಳವಣಿಗೆಗೆ ಭದ್ರ ಅಡಿಪಾಯ ಹಾಕಬಹುದು.
>
> – ಲಲಿತಾ ಅಳವಂಡಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ, ರೋಣ

ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಅಂಗನವಾಡಿ ಮೇಲ್ವಿಚಾರಕಿ ಜಯಶ್ರೀ ಹೂಗಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಿ.ಎನ್. ಬಚ್ಚನಹಳ್ಳಿ, ಬಾಲವಿಕಾಸ ಸಮಿತಿ ಅಧ್ಯಕ್ಷರು, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತ-ರಿದ್ದರು.

ಗಂಗಮ್ಮ ಪಾಟೀಲ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಅನ್ನಪೂರ್ಣ ಭಜಂತ್ರಿ ಸ್ವಾಗತಿಸಿದರು. ಗೀತಾ ಮೇಟಿ ನಿರೂಪಿಸಿದರು. ರೇಣುಕಾ ಪಾಟೀಲ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka